ಸಂಪುಟ : 10 ಸಂಚಿಕೆ: 147 ಪುಟ : 4+2 ಬೆಲೆ: 3.00 ಮಂಗಳವಾರ ಜುಲೈ 15 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 147 Pages : 4+2 Price : 3.00 Tuesday July 15 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಜು.17ರಂದು ದಿಶಾ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ದಿನಾಂಕ:17-07-2025 ರಂದು ಮಧ್ಯಾಹ್ನ 3.00 ಗಂಟೆಗೆ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ (ದಿಶಾ) ಸಮಿತಿ ಅಧ್ಯಕ್ಷರು ಹಾಗೂ ಸಂಸದರಾದ ಬಸವರಾಜ್ ಬೊಮ್ಮಾಯಿ ಅವರ ಅಧ್ಯಕ್ಷತೆಯಲ್ಲಿ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ (ದಿಶಾ) ಸಮಿತಿಯ ಪ್ರಗತಿ ಪರಿಶೀಲನಾ ಸಭೆಯನ್ನು ಏರ್ಪಡಿಸಲಾಗಿದೆ ಎಂದು ಜಿ ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ತಿಳಿಸಿದ್ದಾರೆ.

## ಮೂಲ ದಾಖಲೆಗಳ ಪರಿಶೀಲನೆಗೆ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯಲ್ಲಿ ಗುತ್ತಿಗೆ ಆಧಾರದ ಮೇಲೆ ಜಿಲ್ಲಾ ಸಾರ್ವಜನಿಕ ಆರೋಗ್ಯ ಪ್ರಯೋಗಾಲಯದ ಲ್ಯಾಬ್ ಅಸಿಸ್ಟೆಂಟ್ ಕಂ ಡಿಇಓ ಹುದ್ದೆಗೆ ಗದಗ ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಅಧ್ಯಕ್ಷರು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ, ಗದಗ ಇವರ ಅನುಮೋದನೆ ಮೇರೆಗೆ ಅರ್ಹ ಅಭ್ಯರ್ಥಿಗಳಿಂದ ದಿನಾಂಕ:11.03.2025 ರಿಂದ 21.03.2025 ರ ಸಂಜೆ 5.30ರ ವರೆಗೆ gadag.nic.in ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು.

ಸದರಿ ಹುದ್ದೆಗೆ ಅಪ್‌ಲೋಡ್ ಆಗಿರುವ ಅರ್ಜಿಗಳಿಗೆ ರೋಷ್ಟರ್ ಕಂ ಮೆರಿಟ್ ಅಳವಡಿಸಿ 01 ಲ್ಯಾಬ್ ಅಸಿಸ್ಟೆಂಟ್ ಕಂ ಡಿಈಓ ಹುದ್ದೆಗೆ ರೋಷರ್ ಸಂ.1 ರಲ್ಲಿ 1:7 ಪಟ್ಟಿ ತಯಾರಿಸಿದೆ. ಸದರಿ ಅಭ್ಯರ್ಥಿಗಳಿಗೆ ದಿನಾಂಕ:15.07.2025 ರಿಂದ 17.07.2025ರ ಸಂಜೆ 04.00 ವರೆಗೆ ಕಚೇರಿ ಸಮಯದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿ, ಗದಗ ಇಲ್ಲಿಗೆ ಅಭ್ಯರ್ಥಿಗಳ ಮೂಲ ದಾಖಲಾತಿಗಳ (Original Documents) ಪರಿಶೀಲನೆಗೆ ಆಹ್ವಾನಿಸಲಾಗಿದೆ. ಮೂಲದಾಖಲಾತಿಗಳ ಪರಿಶೀಲನೆಗೆ ಆಯ್ಕೆಯಾದ ಅಭ್ಯರ್ಥಿಗಳ ಪಟ್ಟಿಯನ್ನು gadag.nic.in ವೆಬ್‌ಸೈಟ್‌ನಲ್ಲಿ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿರುತ್ತದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್ ಎಸ್ ನೀಲಗುಂದ ತಿಳಿಸಿದ್ದಾರೆ.

## ಹಸು ಸಾಗಾಟ: ಬಜರಂಗದಳ ಕಾರ್ಯಕರ್ತರಿಂದ ರಕ್ಷಣೆ!

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಚನ್ನಮ್ಮನ ಕಿತ್ತೂರಿನಿಂದ ಗೂಡ್ಸ್ ವಾಹನದಲ್ಲಿ ಅಕ್ರಮವಾಗಿ ಸಾಗಿಸಲಾಗುತ್ತಿದ್ದ ಆಕಳು ಹಾಗೂ ಎಮ್ಮೆಗಳನ್ನು ಬಜರಂಗದಳ ಕಾರ್ಯಕರ್ತರು ರಕ್ಷಿಸಿದ್ದಾರೆ. ಕಿತ್ತೂರಿನಿಂದ ಹುಬ್ಬಳ್ಳಿಗೆ ಗೂಡ್ಸ್ ವಾಹನದಲ್ಲಿ ಆಕಳು ಹಾಗೂ ಎಮ್ಮೆ ಸಾಗಿಸುತ್ತಿರುವ ಮಾಹಿತಿ ಪಡೆದ ಬಜರಂಗದಳ ಕಾರ್ಯಕರ್ತರು, ಆ ಗೂಡ್ಸ್ ವಾಹನ ಹುಬ್ಬಳ್ಳಿ, ಧಾರವಾಡ ಬೈಪಾಸ್ ರಸ್ತೆಯಲ್ಲಿರುವ ನರೇಂದ್ರ ಟೋಲ್‌ಗೇಟ್ ದಾಟಿ ಬಂದ ತಕ್ಷಣವೇ ಅಡ್ಡಗಟ್ಟಿ ನಿಲ್ಲಿಸಿದ್ದಾರೆ.

**'ಶಕ್ತಿ' ಸಂಭ್ರಮಾಚರಣೆ ನಿಮಿತ್ತ ಬಸ್‌ಗೆ ಪೂಜೆ ಸಲ್ಲಿಸಿದ ಶಾಸಕ ಜಿ.ಎಸ್. ಪಾಟೀಲ । ವಿದ್ಯಾರ್ಥಿಗಳಿಗೂ ಉಚಿತ ಬಸ್ ಪ್ರಯಾಣದ ಸೌಲಭ್ಯ**

# 'ಶಕ್ತಿ' ಯೋಜನೆಗೆ ಅಭೂತಪೂರ್ವ ಬೆಂಬಲ

■ವಿಜಯಸಾಕ್ಷಿ ಸುದ್ದಿ, ರೋಣ

ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಕಾಂಗ್ರೆಸ್ ಸರಕಾರ ಜಾರಿಗೆ ತಂದಿರುವ ಶಕ್ತಿ ಯೋಜನೆ ಗಿನ್ನಿಸ್ ದಾಖಲೆ ನಿರ್ಮಿಸಿದ್ದು, 500 ಕೋಟಿ ಮಹಿಳಾ ಪ್ರಯಾಣಿಕರು ಉಚಿತವಾಗಿ ಸಂಚರಿಸುವ ಮೂಲಕ ಸರಕಾರದ ಮಹತ್ವಾಕಾಂಕ್ಷಿ ಯೋಜನೆಗೆ ಅಭೂತಪೂರ್ವ ಬೆಂಬಲ ವ್ಯಕ್ತಪಡಿಸಿದ್ದಾರೆ ಎಂದು ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷರು, ಶಾಸಕರಾದ ಜಿ.ಎಸ್. ಪಾಟೀಲ ಹೇಳಿದರು.

ಅವರು ಸೋಮವಾರ 'ಶಕ್ತಿ' ಯೋಜನೆಯ

> ಬಿಜೆಪಿಯವರು ಪಂಚ ಗ್ಯಾರಂಟಿಗಳ ಬಗ್ಗೆ ವಿರೋಧ ವ್ಯಕ್ತಪಡಿಸಿದ್ದಲ್ಲದೆ, ಅಪಪ್ರಚಾರವನ್ನೂ ಮಾಡಿದ್ದರು. ಯೋಜನೆಗಳು ಸಂಪೂರ್ಣ ಜಾರಿಯಾಗುವುದಿಲ್ಲ ಎಂದು ಟೀಕಿಸಿದ್ದರು. ವಿಪರ್ಯಾಸವೆಂದರೆ, ಎರಡು ವರ್ಷಗಳಿಂದ ಕಾಂಗ್ರೆಸ್ ನೇತೃತ್ವದ ಗ್ಯಾರಂಟಿ ಯೋಜನೆಗಳು ಯಾವುದೇ ತೊಡಕುಗಳಿಲ್ಲದೆ ನಿರಂತರವಾಗಿ ಸಾಗುತ್ತಿವೆ. ಇದರಿಂದ ಬಡ ಮಹಿಳೆಯರಿಗೆ ಅನುಕೂಲವಾಗಿದ್ದಲ್ಲದೆ ಆರ್ಥಿಕ ಸಬಲತೆಯನ್ನೂ ನೀಡಿದೆ.
>
> **– ಜಿ.ಎಸ್. ಪಾಟೀಲ.**
> **ಶಾಸಕರು, ರೋಣ.**



ಫಲಾನುಭವಿಗಳ ಸಂಖ್ಯೆ 500 ಕೋಟಿ ದಾಟಿದ ಹಿನ್ನೆಲೆಯಲ್ಲಿ ನಗರದ ಬಸ್ ನಿಲ್ದಾಣದಲ್ಲಿ ಬಸ್‌ಗೆ ಪೂಜೆ ಸಲ್ಲಿಸಿ, ಮಹಿಳಾ ಪ್ರಯಾಣಿಕರಿಗೆ ಸಿಹಿ ಹಂಚಿ ಮಾತನಾಡುತ್ತಿದ್ದರು.

ರಾಜ್ಯ ಸರಕಾರ ವಿದ್ಯಾರ್ಥಿನಿಯರಿಗಲ್ಲದೆ ಈ ಬಾರಿ ವಿದ್ಯಾರ್ಥಿಗಳಿಗೂ ಸಹ ಉಚಿತ ಬಸ್ ಪ್ರಯಾಣದ ಸೌಲಭ್ಯ ನೀಡಲಿದೆ. ಇದರಿಂದ ಗ್ರಾಮೀಣ ಭಾಗದ ರೈತರ, ಬಡವರ, ಕೂಲಿ ಕಾರ್ಮಿಕರ ಮಕ್ಕಳಿಗೆ ಅನುಕೂಲವಾಗಲಿದೆ. ಈ ಯೋಜನೆ ಶೀಘ್ರವೇ ಜಾರಿಯಾಗಲಿದೆ. ವಿದ್ಯಾರ್ಥಿಗಳು ಸರಕಾರದ ಯೋಜನೆಯ ಲಾಭ ಪಡೆದುಕೊಂಡು ಗುಣಮಟ್ಟದ ಶಿಕ್ಷಣ ಪಡೆಯಬೇಕು ಎಂದರು.

ಗದಗ ಜಿಲ್ಲೆಯಲ್ಲಿ ಶಕ್ತಿ ಯೋಜನೆಯು ಅತ್ಯಂತ ಯಶಸ್ವಿಯಾಗಿ ಸಾಗಿದೆ. ರೋಣ ಸಾರಿಗೆ ಘಟಕದಿಂದ 1 ಕೋಟಿ 75 ಲಕ್ಷ ಮಹಿಳೆಯರು ಉಚಿತವಾಗಿ ಪ್ರಯಾಣಿಸಿದ್ದು ಇತಿಹಾಸವಾಗಿದೆ. ಗದಗ ಜಿಲ್ಲೆಯಲ್ಲಿ 12 ಕೋಟಿಗೂ ಹೆಚ್ಚು ಮಹಿಳೆಯರು ಉಚಿತ ಪ್ರಯಾಣ ಮಾಡಿದ್ದು, ಸರಕಾರದ ಯೋಜನೆಗೆ ಸಿಕ್ಕ ಪ್ರತಿಫಲವಾಗಿದೆ. ಇದರಿಂದ ಸರಕಾರದ ಕೀರ್ತಿ ಹೆಚ್ಚಿದೆ. ಮುಖ್ಯವಾಗಿ ಗೃಹಲಕ್ಷ್ಮೀ, ಗೃಹಜ್ಯೋತಿ, ಯುವ ನಿಧಿಯಂತಹ ಕಾರ್ಯಕ್ರಮಗಳು ಜನರ ಮನಸ್ಸನ್ನು ಗೆದ್ದಿರುವುದು ನಮ್ಮ ಸರಕಾರದ ಸಾಧನೆಯಾಗಿದೆ. ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರಕಾರ ಇನ್ನೂ ಹಲವಾರು ಮಹತ್ವದ ಯೋಜನೆಗಳನ್ನು ಘೋಷಿಸಲಿದೆ ಎಂದರು.

> ಸರಕಾರದ ಮಹತ್ವಾಕಾಂಕ್ಷಿ ಯೋಜನೆಯ ಪ್ರತಿಫಲವಾಗಿ ಮಹಿಳಾ ಪ್ರಯಾಣಿಕರ ಸಂಖ್ಯೆ 500 ಕೋಟಿ ದಾಟಿದೆ. ಇದರಿಂದ ಬಡ, ಮಧ್ಯಮ, ಕೂಲಿ ಕಾರ್ಮಿಕರ ಬದುಕು ಹಸನುಗೊಳ್ಳಲು ಶಕ್ತಿ ಯೋಜನೆ ಮತ್ತಷ್ಟು ಶಕ್ತಿ ನೀಡಿದೆ.
>
> **– ಸಂಗನಗೌಡ ಪಾಟೀಲ.**
> **ತಾಲೂಕಾ ಗ್ಯಾರಂಟಿ ಸಮಿತಿ ಅಧ್ಯಕ್ಷರು.**

ಗ್ಯಾರಂಟಿ ಸಮಿತಿ ಅಧ್ಯಕ್ಷ ಸಂಗನಗೌಡ ಪಾಟೀಲ, ತಾ.ಪಂ ಇಓ ಚಂದ್ರಶೇಖರ ಕಂದಕೂರ, ಪುರಸಭೆ ಉಪಾಧ್ಯಕ್ಷ ಹನ್ಮಂತ ತಳ್ಳಿಕೇರಿ, ವೀರಣ್ಣ ಶೆಟ್ಟರ, ಬಾವಾಸಾಬ ಬೇಟಗೇರಿ, ವಿ.ಬಿ. ಸೋಮನಕಟ್ಟಿಮಠ, ಯೂಸುಫ್ ಇಟಗಿ, ದುರ್ಗಪ್ಪ ಹಿರೇಮನಿ, ಆನಂದ ಚಂಗಳಿ, ಸಂಗು ನವಲಗುಂದ, ಅಪ್ಪು ಗಿರಡ್ಡಿ, ಶಿವು ಹುಲ್ಲೂರ, ಬಸವರಾಜ ತಳವಾರ, ಮಲಿಕ್ ಯಲಿಗಾರ, ನಾಜಬೇಗಂ ಯಲಿಗಾರ, ಗೀತಾ ಕೊಪ್ಪದ, ಲಕ್ಷ್ಮೀ ಗಡಗಿ, ವಿದ್ಯಾ ದೊಡ್ಡಮನಿ ಸೇರಿದಂತೆ ನೂರಾರು ಮಹಿಳೆಯರು ಉಪಸ್ಥಿತರಿದ್ದರು.

**500 ಕೋಟಿ ಗಡಿ ದಾಟಿದ 'ಶಕ್ತಿ' ಫಲಾನುಭವಿಗಳು । ಗದಗ ಬಸ್ ನಿಲ್ದಾಣದಲ್ಲಿ ಸಂಭ್ರಮೋತ್ಸವ**

# ಮಹಿಳೆಯರ ಬದುಕಿಗೆ ಬಲವಾದ 'ಶಕ್ತಿ'

■ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರಿ ಬಸ್‌ಗಳಲ್ಲಿ ಹೆಣ್ಣುಮಕ್ಕಳಿಗೆ ಉಚಿತ ಪ್ರಯಾಣದ ಸೌಲಭ್ಯ ಕಲ್ಪಿಸಿರುವ ಏಕೈಕ ಸರ್ಕಾರ ಮುಖ್ಯಮಂತ್ರಿ ಸಿದ್ದರಾಮಯ್ಯನವರ ನೇತೃತ್ವದ ನಮ್ಮ ಕರ್ನಾಟಕ ರಾಜ್ಯ ಸರ್ಕಾರ ಎಂಬ ಹೆಮ್ಮೆ, ಸಾರ್ಥಕತೆ ನಮಗಿದೆ ಎಂದು ತಾಲೂಕಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ಹೇಳಿದರು.

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಗಳಲ್ಲೊಂದಾದ ಶಕ್ತಿ ಯೋಜನೆಯಡಿ 500 ಕೋಟಿ ಮಹಿಳಾ ಪ್ರಯಾಣಿಕರು ಪ್ರಯಾಣಿಸಿದ ಸಂಭ್ರಮದ ಹಿನ್ನೆಯಲ್ಲಿ ಗದಗ ನಗರದ ಗಾನಯೋಗಿ ಪಂ. ಪುಟ್ಟರಾಜ ಗವಾಯಿಗಳ ಬಸ್ ನಿಲ್ದಾಣದಲ್ಲಿ ಸೋಮವಾರ ಬಸ್‌ಗೆ ಪೂಜೆ ಸಲ್ಲಿಸಿ, ಸಾರ್ವಜನಿಕರಿಗೆ ಸಿಹಿ ವಿತರಿಸಿ ಅವರು ಮಾತನಾಡಿದರು.

> ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಉಪಾಧ್ಯಕ್ಷ ಪೀರ್‌ಸಾಬ್ ಕೌತಾಳ, ಗದಗ ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್ ಸಾಬ್ ಬಬರ್ಚಿ, ಸಮಿತಿಯ ಜಿಲ್ಲಾ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕಾಧ್ಯಕ್ಷ ಅಶೋಕ ಮಂದಾಲಿ, ಕೃಷ್ಣಗೌಡ ಹೆಚ್.ಪಾಟೀಲ ಸೇರಿದಂತೆ ಎಲ್ಲ ಸದಸ್ಯರು ನೆರೆದ ಸಾರ್ವಜನಿಕರಿಗೆ ಸಿಹಿ ಹಂಚಿ ಸಂಭ್ರಮಿಸಿದರು.



ಮಹಿಳಾ ಸಬಲೀಕರಣದ ಮಹತ್ವಾಕಾಂಕ್ಷೆಯೊಂದಿಗೆ ಪ್ರಾರಂಭಿಸಲಾದ 'ಶಕ್ತಿ' ಯೋಜನೆಯ ಫಲಾನುಭವಿಗಳ ಸಂಖ್ಯೆ ಇಂದಿಗೆ 500 ಕೋಟಿ ಗಡಿಯನ್ನು ದಾಟಿ ದಾಖಲೆ ಬರೆದಿದೆ. ನಾಡಿನ ಹೆಣ್ಣುಮಕ್ಕಳು ಉದ್ಯೋಗ, ಶಿಕ್ಷಣ, ವೈದ್ಯಕೀಯ ಚಿಕಿತ್ಸೆ ಮುಂತಾದ ಉದ್ದೇಶಗಳಿಗೆ ಕುಟುಂಬದ ಯಜಮಾನನ ಮೇಲೆ ಅವಲಂಬಿತರಾಗದೆ ಸ್ವತಂತ್ರ ನಿರ್ಣಯ ಕೈಗೊಂಡು ಸ್ವಾವಲಂಬಿ ಬದುಕಿನೆಡೆಗೆ ಪಯಣಿಸಬೇಕು ಎಂಬ ಉದ್ದೇಶದಿಂದ ಈ ಯೋಜನೆಯನ್ನು ಜಾರಿಗೊಳಿಸಲಾಗಿದ್ದು, ಇದು ಅತ್ಯಂತ ಯಶಸ್ವಿಯಾಗಿ ಮುನ್ನಡೆಯುತ್ತಿರುವ ಬಗ್ಗೆ ಹೆಮ್ಮೆಯಿದೆ ಎಂದರು.

ಗದಗ ತಾಲೂಕು ಸಾರಿಗೆ ಘಟಕದಲ್ಲಿ 8,31,378 ಮಹಿಳಾ ಪ್ರಯಾಣಿಕರು ಪ್ರಯಾಣ ಬೆಳೆಸುವ ಮೂಲಕ ದಾಖಲೆಯ 253.28 ಲಕ್ಷ ರೂ ಟಿಕೆಟ್ ಮೊತ್ತದ ಪ್ರಯಾಣ ಮಾಡಿದ್ದಾರೆ. ಅದರಂತೆ ಗದಗ ಜಿಲ್ಲೆಯಲ್ಲಿ 10.98 ಲಕ್ಷ ಮಹಿಳೆಯರು ಪ್ರಯಾಣಿಸುವ ಮೂಲಕ 358.89 ಕೋಟಿ ರೂ ಆದಾಯವಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸಮಿತಿಯ ಸದಸ್ಯರಾದ ಶಂಭು ಎಸ್.ಕಾಳೆ, ಮೀನಾಕ್ಷಿ ಬೆನಕಣ್ಣನವರ, ಸಾವಿತ್ರಿ ಹೂಗಾರ, ದಯಾನಂದ್ ಪವಾರ, ಸಂಗು ಕರೆಕಲಮಟ್ಟಿ, ಎನ್.ಬಿ. ದೇಸಾಯಿ, ಸಂಗಮೇಶ್ ಹಾದಿಮನಿ, ರಮೇಶ್ ಹೊನ್ನಿನಾಯ್ಕರ, ದೇವರಡ್ಡಿ ತಿರ್ಲಾಪುರ್, ಮಲ್ಲಪ್ಪ ಚಿಂಚಲಿ, ಗಣೇಶ್ ಸಿಂಗ್ ಮಿಟಾಡೆ, ಮಲ್ಲಪ್ಪ ಬಾರಕೇರ, ಭಾಷಾಸಾಬ್ ಮಲ್ಲಸಮುದ್ರ, ಗಣರಾದ ಬಸವರಾಜ ಕಡೆಮನಿ, ಜಾನಕಿ ಮಲ್ಲಾಪುರ, ಶರೀಫ್ ಬಿಳಿಯಲಿ, ಕೆಎಸ್‌ಆರ್‌ಟಿಸಿ ಗದಗ ವಿಭಾಗೀಯ ನಿಯಂತ್ರಣಾಧಿಕಾರಿ ಡಿ ದೇವರಾಜ, ವಿಭಾಗೀಯ ಸಂಚಲನಾಧಿಕಾರಿ ಪಿ.ವೈ. ಮೇತ್ರಿ, ಡಿಪೋ ಮ್ಯಾನೇಜರ್ ಬಿ.ಎಲ್. ಗೆಣ್ಣೂರ, ನಿಯಂತ್ರಕರಾದ ವೆಂಕಟೇಶ್ ಜಾದವ, ಶಿವಾನಂದ ಸಂಗಣ್ಣನವರ, ಎಂ.ಬಿ. ಪಾಟೀಲ ಮುಂತಾದವರು ಉಪಸ್ಥಿತರಿದ್ದರು.

> ಐದು ಗ್ಯಾರಂಟಿ ಯೋಜನೆಗಳ ಪೈಕಿ ರಾಜ್ಯ ಸರ್ಕಾರ ಮೊದಲು ಜಾರಿಗೊಳಿಸಿದ 'ಶಕ್ತಿ' ಯೋಜನೆ ರಾಜ್ಯದ ಎಲ್ಲಾ ಮಹಿಳೆಯರು, ವಿದ್ಯಾರ್ಥಿನಿಯರು ಮತ್ತು ಲಿಂಗತ್ವ ಅಲ್ಪ ಸಂಖ್ಯಾತರಿಗೆ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಗಳ ಬಸ್‌ಗಳಲ್ಲಿ ಉಚಿತವಾಗಿ ಪ್ರಯಾಣಿಸುವ ಸೌಲಭ್ಯವನ್ನು ಒದಗಿಸಿ ರಾಜ್ಯದ ಮಹಿಳೆಯರ ಸಬಲೀಕರಣಕ್ಕೆ ಕಾರಣವಾಗಿದೆ.
>
> **– ಕೃಷ್ಣಗೌಡ ಹೆಚ್.ಪಾಟೀಲ.**
> **ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಸದಸ್ಯರು.**

**ಶಕ್ತಿ ಯೋಜನೆಯಡಿ 500 ಕೋಟಿ ಮಹಿಳೆಯರ ಉಚಿತ ಪ್ರಯಾಣ; ಸಂಭ್ರಮಾಚರಣೆ**

## ಮಹಿಳೆಯರಲ್ಲಿ ಅರಿವು ಹೆಚ್ಚಿಸಿದ 'ಶಕ್ತಿ'

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಸರ್ಕಾರದ ಪಂಚ ಗ್ಯಾರಂಟಿಗಳಲ್ಲಿ ಅತ್ಯಂತ ಜನಪ್ರಿಯವಾಗಿರುವ ಶಕ್ತಿ ಯೋಜನೆಯಡಿ ಈವರೆಗೆ 500 ಕೋಟಿ ಮಹಿಳೆಯರು ಉಚಿತವಾಗಿ ಪ್ರಯಾಣ ಮಾಡಿದ್ದಾರೆ ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ ಹೇಳಿದರು.

ಕರ್ನಾಟಕ ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಗಳಲ್ಲೊಂದಾದ ಶಕ್ತಿ ಯೋಜನೆಯಡಿ 500 ಕೋಟಿ ಮಹಿಳಾ ಪ್ರಯಾಣಿಕರು ಪ್ರಯಾಣ ಮಾಡಿದ ಸಂಭ್ರಮದ ಹಿನ್ನೆಯಲ್ಲಿ ಗದಗ ನಗರದ ಕೇಂದ್ರ ಬಸ್ ನಿಲ್ದಾಣದಲ್ಲಿ ಸೋಮವಾರ ಬಸ್‌ಗೆ ಪೂಜೆ ಮಾಡಿ, ಸಿಹಿ ವಿತರಿಸಿ ಅವರು ಮಾತನಾಡಿದರು.

ಈ ಯೋಜನೆ ಯಶಸ್ವಿಯಾಗಲು ಸಾರಿಗೆ ಇಲಾಖೆಯ ಸಿಬ್ಬಂದಿ ಹಾಗೂ ಸರ್ಕಾರದ ಉತ್ಸಾಹದ ಕಾರ್ಯವೈಖರಿಯೇ ಕಾರಣವಾಗಿದೆ. ಶಕ್ತಿ ಯೋಜನೆಯ ಮೂಲಕ ಮಹಿಳೆಯರಿಗೆ ಉಚಿತವಾಗಿ ರಾಜ್ಯದಾದ್ಯಂತ ಪ್ರವಾಸ ಮಾಡುವ ಅವಕಾಶ ದೊರೆತಿದ್ದು, ಇತಿಹಾಸ,



ಸಂಸ್ಕೃತಿ ಮತ್ತು ಪರಂಪರೆಯ ಅರಿವು ಹೆಚ್ಚಾಗಿದೆ. ಈ ಯೋಜನೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಅವರ ನಿಷ್ಠೆಯಿಂದ ಯಶಸ್ಸು ಕಂಡಿದೆ ಎಂದರು.

ಗದಗ ಜಿಲ್ಲೆಯಲ್ಲಿ ಇದುವರೆಗೆ 10.98 ಲಕ್ಷ ಮಹಿಳೆಯರು ಈ ಯೋಜನೆಯ ಲಾಭ ಪಡೆದಿದ್ದು, 358.89 ಕೋಟಿ ರೂಪಾಯಿ ಮೌಲ್ಯದ ಪ್ರಯಾಣವಾಗಿದೆ ಎಂದು ಅಸೂಟಿ ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಉಪಾಧ್ಯಕ್ಷ ಪೀರ್‌ಸಾಬ್ ಕೌತಾಳ, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್‌ಸಾಬ್ ಬಬರ್ಚಿ, ಸಮಿತಿಯ ಸದಸ್ಯರಾದ ಕೃಷ್ಣಗೌಡ ಎಚ್.ಪಾಟೀಲ, ಅಶೋಕ ಮಂದಾಲಿ ಮುಂತಾದವರು ಪಾಲ್ಗೊಂಡಿದ್ದರು.

ಈ ಸಂದರ್ಭದಲ್ಲಿ ವಾಯುವ್ಯ ಕರ್ನಾಟಕ ಸಾರಿಗೆ ನಿಗಮದ ಗದಗ ವಿಭಾಗೀಯ ನಿಯಂತ್ರಣಾಧಿಕಾರಿ ಡಿ. ದೇವರಾಜ, ಸಂಚಲನಾಧಿಕಾರಿ ಪಿ.ವೈ. ಮೇತ್ರಿ, ಡಿಪೋ ಮ್ಯಾನೇಜರ್ ಬಿ.ಎಲ್. ಗೆಣ್ಣೂರ, ವೆಂಕಟೇಶ್ ಜಾದವ, ಶಿವಾನಂದ ಸಂಗಣ್ಣನವರ, ಎಂ.ಬಿ. ಪಾಟೀಲ ಸೇರಿ ಹಲವರು ಉಪಸ್ಥಿತರಿದ್ದರು.

**ಕಿತ್ತೂರ ರಾಣಿ ಚನ್ನಮ್ಮ ವಸತಿ ಶಾಲಾ ಕಟ್ಟಡವನ್ನು ಉದ್ಘಾಟಿಸಿದ ಶಾಸಕ ಜಿ.ಎಸ್. ಪಾಟೀಲ**

## ಸರ್ಕಾರದಿಂದ ಶಿಕ್ಷಣ ಕ್ಷೇತ್ರಕ್ಕೆ ಹೆಚ್ಚಿನ ಆದ್ಯತೆ

■ವಿಜಯಸಾಕ್ಷಿ ಸುದ್ದಿ, ಡಂಬಳ


ಶಿಕ್ಷಣ ಶ್ರೀಮಂತರಿಗೆ ಮಾತ್ರ ಸೀಮಿತವಾಗದೆ, ಸಮಾಜದ ಬಡವರಿಗೂ ಗುಣಮಟ್ಟದ ಶಿಕ್ಷಣ ದೊರಕಬೇಕು ಎಂಬ ಉದ್ದೇಶದಿಂದ ಸರ್ಕಾರ ರಾಜ್ಯಾದ್ಯಂತ ವಸತಿ ಶಾಲೆಗಳ ಸ್ಥಾಪನೆಗೆ ಮುಂದಾಗಿದೆ. ನಮ್ಮ ಸರ್ಕಾರ ಶಿಕ್ಷಣ ಕ್ಷೇತ್ರಕ್ಕೆ ಹೆಚ್ಚಿನ ಆದ್ಯತೆ ನೀಡಿದೆ ಎಂದು ಕರ್ನಾಟಕ ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷ ಹಾಗೂ ರೋಣ ಕ್ಷೇತ್ರದ ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಡಂಬಳ ಹೋಬಳಿಯ ಡೋಣಿ ಗ್ರಾಮದಲ್ಲಿ 18 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣವಾದ ಕಿತ್ತೂರ ರಾಣಿ ಚನ್ನಮ್ಮ ವಸತಿ



ಶಾಲಾ ಕಟ್ಟಡವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸುಸಜ್ಜಿತ ಕಟ್ಟಡದಿಂದ ಈ ಭಾಗದ ಮಕ್ಕಳು ಗುಣಮಟ್ಟದ ಶಿಕ್ಷಣವನ್ನು ಪಡೆಯಲು ಉತ್ತಮ



> ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ಮಕ್ಕಳು ಬಡವರು ಎನ್ನುವ ಕೀಳರಿಮೆ ಬಿಟ್ಟು, ಶಿಸ್ತು ಹಾಗೂ ಸಮಯ ಪಾಲನೆಗೆ ಆದ್ಯತೆ ನೀಡಬೇಕು. ಸರ್ಕಾರ ಶಿಕ್ಷಣಕ್ಕೆ ಸಾಕಷ್ಟು ಅನುದಾನ ನೀಡುತ್ತಿದೆ. ಈ ಸೌಲಭ್ಯಗಳನ್ನು ಸರಿಯಾಗಿ ಉಪಯೋಗಿಸಿ, ಉತ್ತಮ ಭವಿಷ್ಯ ನಿರ್ಮಿಸಿಕೊಳ್ಳಬೇಕು ಎಂದರು.

ವಾತಾವರಣ ದೊರಕುತ್ತಿದೆ. ಈ ವಸತಿ ನಿಲಯದ ಶೈಕ್ಷಣಿಕ ಮತ್ತು ಆಡಳಿತಾತ್ಮಕ ಸುಧಾರಣೆಗೆ ಸಾರ್ವಜನಿಕರು ಸಹಕಾರ ನೀಡಬೇಕು. ಕನ್ನಡ ಮತ್ತು ಆಂಗ್ಲ ಮಾಧ್ಯಮ ಎರಡಕ್ಕೂ ಸರ್ಕಾರ ಮಹತ್ವ ನೀಡುತ್ತಿದೆ. ಪಾಲಕರು ಜಾಗರೂಕರಾಗಿ ಮಕ್ಕಳ ಶಿಕ್ಷಣದತ್ತ ಗಮನ ಹರಿಸಬೇಕು. ವಸತಿ ನಿಲಯದಲ್ಲಿ ಸ್ವಚ್ಛತೆ, ಶಿಸ್ತು ಹಾಗೂ ನಿರ್ವಹಣೆ ಅತ್ಯಗತ್ಯ ಎಂದು ಹೇಳಿದರು.

ಲೋಕೋಪಯೋಗಿ ಇಲಾಖೆಯ ಕಾರ್ಯನಿರ್ವಾಹಕ ಇಂಜಿನಿಯರ್ ವಿ.ಎನ್. ಪಾಟೀಲ ಮಾತನಾಡಿ, ಇದೊಂದು ಪ್ರಾಚೀನ ಗುರುಕುಲ ಪದ್ಧತಿಯ ಮಾದರಿಯಲ್ಲಿ ನಿರ್ಮಿತ ಶಿಕ್ಷಣ ಕೇಂದ್ರವಾಗಿದೆ. ಇದನ್ನು ವಿದ್ಯಾರ್ಥಿಗಳು ಸಂಪೂರ್ಣವಾಗಿ ಬಳಸಿಕೊಳ್ಳಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಶಾಲೆಯ ನಿರ್ಮಾಣಕ್ಕೆ ಜಮೀನು ದಾನ ನೀಡಿದ ಜಗದೀಶ್ವರಪ್ಪ ಬಸಪ್ಪ ಮೈನಳ್ಳಿ ಮತ್ತು ಲಕ್ಷ್ಮಪ್ಪ ಹನಮಪ್ಪ ಹೂಗಾರ ಅವರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಡೋಣಿ ಗ್ರಾ.ಪಂ ಅಧ್ಯಕ್ಷೆ ಹುಲಿಗೆವ್ವ ಅಳವಂಡಿ, ತಾಲೂಕ ಗ್ಯಾರಂಟಿ ಸಮಿತಿ ಅಧ್ಯಕ್ಷ ಡಿ.ಡಿ. ಮೋರನಾಳ, ತಹಸೀಲ್ದಾರ ಎರಿಸ್ವಾಮಿ, ಇಓ ವಿಶ್ವನಾಥ ಹೊಸಮನಿ, ಸಹಾಯಕ ಇಂಜಿನಿಯರ್ ಬಸವರಾಜ ಎಚ್, ಕ್ಷೇತ್ರ ಶಿಕ್ಷಣಾಧಿಕಾರಿ ಗಂಗಾಧರ ಅಣ್ಣಿಗೇರಿ, ಡಾ. ಅರುಣಾ ಸೋರಗಾಂವಿ, ಪ್ರಾಂಶುಪಾಲರಾದ ಶಶಿಕಲಾ ಸೂಳಿಭಾವಿ, ಮುಂಡರಗಿ ವೃತ್ತ ನಿರೀಕ್ಷಕ ಮಂಜುನಾಥ ಕುಸಗಲ್ ಹಾಗೂ ಗ್ರಾಮಸ್ಥರು, ಪಾಲಕರು, ಶಿಕ್ಷಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಹಿರಿಯ ನಟಿ 'ಅಭಿನಯ ಸರಸ್ವತಿ' ಖ್ಯಾತಿಯ ಬಿ.ಸರೋಜಾದೇವಿ ನಿಧನ..!



**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಕನ್ನಡ ಚಿತ್ರರಂಗದ ಹಿರಿಯ ನಟಿ ಬಿ. ಸರೋಜಾ ದೇವಿ (87) ಅವರು ಸೋಮವಾರ ಮುಂಜಾನೆ ವಿಧಿವಶರಾಗಿದ್ದಾರೆ. ಅವರಿಗೆ ಇಬ್ಬರು ಮಕ್ಕಳಿದ್ದಾರೆ. ಕಳೆದ ಕೆಲವು ದಿನಗಳಿಂದ ಸರೋಜಾ ದೇವಿ ಅವರು ವಯೋ ಸಹಜ ಕಾಯಿಲೆಯಿಂದ ಬಳಲುತ್ತಿದ್ದರು.

ಆರೂವರೆ ದಶಕಗಳ ಕಾಲ ಅವರು ಚಿತ್ರರಂಗದಲ್ಲಿ ಇದ್ದರು. 2019ರಲ್ಲಿ ರಿಲೀಸ್ ಆದ ಪುನೀತ್ ರಾಜ್ ಕುಮಾರ್ ನಟನೆಯ 'ನಟ ಸಾರ್ವಭೌಮ' ಅವರು ನಟಿಸಿದ ಕೊನೆಯ ಚಿತ್ರ.

ಸರೋಜಾ ಅವರು 1967ರಲ್ಲಿ ಹರ್ಷ ಅವರನ್ನು ವಿವಾಹ ಆದರು. 1986ರಲ್ಲಿ ಪತಿ ನಿಧನ ಹೊಂದಿದರು. ಈಗ ಪತಿ ಹರ್ಷ ಸಮಾಧಿ ಪಕ್ಕದಲ್ಲೇ ಸರೋಜಾ ಅವರ ಅಂತ್ಯಕ್ರಿಯೆ ನಡೆಯಲಿದೆ. ಬೆಂಗಳೂರಿನ ಕೊಡಿಗೆಹಳ್ಳಿಯ ತೋಟದಲ್ಲಿ ಒಕ್ಕಲಿಗೆ ಸಂಪ್ರದಾಯದಂತೆ ಅಂತ್ಯಕ್ರಿಯೆ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

**ಸಿಎಂ ಸಿದ್ದರಾಮಯ್ಯ ಸಂತಾಪ:** ಬೆಂಗಳೂರು: ಕನ್ನಡದ ಹಿರಿಯ ನಟಿ ಬಿ.ಸರೋಜಾದೇವಿ ಅವರ ನಿಧನಕ್ಕೆ ಸಿಎಂ ಸಿದ್ದರಾಮಯ್ಯ ಸಂತಾಪ ಸೂಚಿಸಿದ್ದಾರೆ.

ಈ ಕುರಿತು ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಕನ್ನಡದ ಹಿರಿಯ ನಟಿ ಬಿ.ಸರೋಜಾದೇವಿ ಅವರ ನಿಧನ ವಾರ್ತೆ ನೋವುಂಟುಮಾಡಿದೆ. ಕನ್ನಡ ಚಿತ್ರರಂಗವು ಸೇರಿದಂತೆ ತಮಿಳು, ತೆಲುಗು ಮತ್ತು ಹಿಂದಿಯ ಸುಮಾರು 200 ಚಿತ್ರಗಳಲ್ಲಿ ನಟಿಸಿ, ಅಭಿನಯ ಸರಸ್ವತಿ ಎಂದೇ ಖ್ಯಾತರಾಗಿದ್ದರು ಎಂದು ಬರೆದುಕೊಂಡಿದ್ದಾರೆ.

ಮಾತ್ರವಲ್ಲದೇ ಸರೋಜಾದೇವಿ ಎಂದಾಕ್ಷಣ ಕಿತ್ತೂರು ಚೆನ್ನಮ್ಮ, ಬಬ್ರುವಾಹನ, ಅಣ್ಣತಂಗಿ ಮುಂತಾದ ಚಿತ್ರಗಳಲ್ಲಿನ ಅವರ ಮನೋಜ್ಞ ಅಭಿನಯ ಕಣ್ಣಮುಂದೆ ಬರುತ್ತದೆ. ಸದಭಿರುಚಿಯ ಚಿತ್ರಗಳ ಮೂಲಕ ಹಲವು ದಶಕಗಳ ಕಾಲ ಸಿನಿಪ್ರಿಯರನ್ನು ರಂಜಿಸಿದ್ದ ಅವರ ಅಗಲಿಕೆ ಭಾರತೀಯ ಚಿತ್ರರಂಗಕ್ಕಾದ ಬಹುದೊಡ್ಡ ನಷ್ಟವಾಗಿದ್ದು, ಸರೋಜಾದೇವಿಯವರ ಆತ್ಮಕ್ಕೆ ಶಾಂತಿ ದೊರಕಲಿ ಎಂದು ಪ್ರಾರ್ಥಿಸುವೆ. ಅವರ ದುಃಖತಪ್ತ ಕುಟುಂಬ ವರ್ಗ ಮತ್ತು ಅಭಿಮಾನಿಗಳಿಗೆ ನನ್ನ ಸಂತಾಪಗಳು ಎಂದು ಸಿಎಂ ಸಿದ್ದರಾಮಯ್ಯ ಬರೆದುಕೊಂಡಿದ್ದಾರೆ.



ವಿಜಯಪುರ: ನಿಂಬೆ ನಾಡು ಇಂಡಿಯ ಕಾರ್ಯಕ್ರಮಕ್ಕೆ ಆಗಮಿಸಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ, "ನಿಂಬೆ ಅಭಿವೃದ್ಧಿ ಮಂಡಳಿ" ಯನ್ನು ಉದ್ಘಾಟಿಸಿದ ಬಳಿಕ ಸ್ಥಳೀಯವಾಗಿ ಬೆಳೆದ ನಿಂಬೆ ಹಣ್ಣಿನ ಪರಿಮಳವನ್ನು ಸವಿದ ಕ್ಷಣ...

## ಲಿಂಬೆ ಅಭಿವೃದ್ಧಿ ಮಂಡಳಿಯ ಲಾಂಛನವನ್ನು ಬಿಡುಗಡೆಗೊಳಿಸಿದರು



**■ವಿಜಯಸಾಕ್ಷಿ ಸುದ್ದಿ, ವಿಜಯಪುರ**

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೋಮವಾರ ವಿಜಯಪುರ ಜಿಲ್ಲೆಯ ಇಂಡಿ ತಾಲೂಕಿನಲ್ಲಿ ಆಯೋಜಿಸಿದ್ದ ಸಮಾರಂಭದಲ್ಲಿ ಶಕ್ತಿ ಯೋಜನೆಯಡಿ 500 ಕೋಟಿ ಬಾರಿ ಮಹಿಳೆಯರು ಉಚಿತ ಪ್ರಯಾಣ ನಡೆಸಿದ ಹಿನ್ನೆಲೆಯಲ್ಲಿ ಕೆ.ಕೆ.ಆರ್.ಟಿ.ಸಿ ಬಸ್‌ಗೆ ಪೂಜೆ ನೆರವೇರಿಸಿ, ಮಹಿಳಾ ಪ್ರಯಾಣಿಕರಿಗೆ ಉಚಿತ ಟಿಕೆಟ್ ವಿತರಿಸಿ, ನಂತರ ವಿವಿಧ ಅಭಿವೃದ್ಧಿ ಕಾರ್ಯಗಳಿಗೆ ಶಂಕುಸ್ಥಾಪನೆ ಹಾಗೂ ಉದ್ಘಾಟನೆ ನೆರವೇರಿಸಿ, ಲಿಂಬೆ ಅಭಿವೃದ್ಧಿ ಮಂಡಳಿಯ ಲಾಂಛನವನ್ನು ಬಿಡುಗಡೆಗೊಳಿಸಿದರು.

ಸ್ಥಳೀಯ ಶಾಸಕರಾದ ಯಶವಂತರಾಯಗೌಡ ಪಾಟೀಲ್ ಅವರ ಅಧ್ಯಕ್ಷತೆಯ ಸಮಾರಂಭದಲ್ಲಿ ಉಪಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್, ಸಚಿವರಾದ ಹೆಚ್.ಸಿ.ಮಹದೇವಪ್ಪ, ದಿನೇಶ್ ಗುಂಡೂರಾವ್, ಎಂ.ಬಿ.ಪಾಟೀಲ್, ಹೆಚ್.ಕೆ.ಪಾಟೀಲ್, ಶಿವಾನಂದ ಎಸ್.ಪಾಟೀಲ್, ಶರಣ ಪ್ರಕಾಶ ಪಾಟೀಲ್ ಸೇರಿದಂತೆ ಹಲವು ಮಂದಿ ಶಾಸಕರು ಹಾಗೂ ಸ್ಥಳೀಯ ಜನಪ್ರತಿನಿಧಿಗಳು ಉಪಸ್ಥಿತರಿದ್ದರು.

## ಮೈಸೂರಲ್ಲಿ ಮಾಸ್ಟರ್ ಕೀ ಬಳಸಿ ಒಂದೇ ಕಂಪನಿಯ 24 ದ್ವಿಚಕ್ರ ವಾಹನ ಕದ್ದ ಕಳ್ಳ

**■ವಿಜಯಸಾಕ್ಷಿ ಸುದ್ದಿ, ಮೈಸೂರು**

ಒಂದೇ ಮಾಸ್ಟರ್ ಕೀ ಬಳಸಿ ಹೋಂಡಾ ಆಕ್ಟೀವಾ ಕಂಪನಿಯ ದ್ವಿಚಕ್ರ ವಾಹನಗಳನ್ನು ಕದಿಯುತ್ತಿದ್ದ ಅಡುಗೆ ಕೆಲಸ ಮಾಡುತ್ತಿದ್ದ ವ್ಯಕ್ತಿಯನ್ನು ಬಂಧಿಸಿ, ಆತನಿಂದ 24 ದ್ವಿಚಕ್ರ ವಾಹನಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ನಗರ ಪೊಲೀಸ್ ಕಮಿಷನರ್ ಸೀಮಾ ಲಾಟ್ಕರ್ ತಿಳಿಸಿದ್ದಾರೆ.

ಇಂದು ನಗರದ ಪೊಲೀಸ್ ಕಮಿಷನರ್ ಕಚೇರಿಯಲ್ಲಿ ಕರೆದ ಪತ್ರಿಕಾಗೋಷ್ಠಿಯಲ್ಲಿ ನಗರ ಪೊಲೀಸ್ ಕಮಿಷನರ್ ಸೀಮಾ ಲಾಟ್ಕರ್ ಅವರು ಕಳೆದ ಎರಡು ತಿಂಗಳಲ್ಲಿ ಮೈಸೂರು ನಗರದ ವಿವಿಧ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಪತ್ತೆಯಾದ ಪ್ರಕರಣಗಳ ಬಗ್ಗೆ ಮಾಹಿತಿ ನೀಡಿದರು. ಈ ಅವಧಿಯಲ್ಲಿ 42 ಸ್ವತ್ತು ಕಳವು ಪ್ರಕರಣ ಪತ್ತೆ ಮಾಡಿ 63 ಲಕ್ಷ ಮೌಲ್ಯದ ಸ್ವತ್ತು ವಶ ಪಡಿಸಿಕೊಳ್ಳಲಾಗಿದೆ. ಜೊತೆಗೆ ಓಆಕಖ ಪ್ರಕರಣಗಳಲ್ಲಿ 65 ಕೆಜಿ 800 ಗ್ರಾಂ ಗಾಂಜಾ, 23 ಗ್ರಾಂ ಒಆಓಂ ಮಾದಕ ಪದಾರ್ಥಗಳನ್ನು ವಶಪಡಿಸಿಕೊಳ್ಳಲಾಗಿದೆ. ಇನ್ನು ಎರಡು ಪ್ರಕರಣಗಳು ಬಹಳ ಇಂಟ್ರೆಸ್ಟಿಂಗ್ ಆಗಿದೆ ಎಂದು ವಿವರಿಸಿದರು.

### ಇನ್ನರ್ ವೀಲ್ ಕ್ಲಬ್ ಗದಗ-ಬೆಟಗೇರಿ: 2025-26ನೇ ಸಾಲಿನ ನೂತನ ಪದಾಧಿಕಾರಿಗಳ ಪರಿಚಯ

# ಸೇವಾ ಉದ್ದೇಶಗಳಿಗೆ ಹೊಸ ಶಕ್ತಿ

ಸಮಾಜಮುಖಿ ಚಟುವಟಿಕೆಗಳ ಮೂಲಕ ಮಹಿಳೆಯರ ಸಾಮರ್ಥ್ಯ ಹೆಚ್ಚಿಸಲು ಸದಾ ಮುಂಚೂಣಿಯಲ್ಲಿರುವ ಇನ್ನರ್ ವೀಲ್ ಕ್ಲಬ್ ಗದಗ-ಬೆಟಗೇರಿಯು 2025-26ನೇ ಸಾಲಿನ ನೂತನ ಪದಾಧಿಕಾರಿಗಳ ಆಯ್ಕೆಯಾಗಿದೆ. ಈ ತಂಡದ ನಾಯಕತ್ವವನ್ನು ವಿವಿಧ ಕ್ಷೇತ್ರಗಳಲ್ಲಿ ಪರಿಣತಿ ಹೊಂದಿದ, ಸಮಾಜಸೇವೆಯಲ್ಲಿ ತೊಡಗಿರುವ ಮಹಿಳೆಯರು ವಹಿಸಿಕೊಂಡಿದ್ದು, ಈ ವರ್ಷದ ಸೇವಾ ಉದ್ದೇಶಗಳಿಗೊಂದು ಹೊಸ ಶಕ್ತಿ ತುಂಬಿದೆ.




**ಅಧ್ಯಕ್ಷೆ ಅಶ್ವಿನಿ ಜಗತಾಪ್:** ಜೀವನಶೈಲಿಯಲ್ಲಿ ನಂಬಿಕೆ ಮತ್ತು ನಿಷ್ಠೆಯೊಂದಿಗೆ ಸಾಗುತ್ತಿರುವ ಅಶ್ವಿನಿ ಜಗತಾಪ್ ಅವರು ಈ ಬಾರಿ ಕ್ಲಬ್ ಅಧ್ಯಕ್ಷೆಯಾಗಿ ನೇಮಕಗೊಂಡಿದ್ದಾರೆ. ಬೆಳಗಾವಿಯಲ್ಲಿ ಹುಟ್ಟಿ ಬೆಳೆದ ಇವರು, ಸಾಹಿತ್ಯ, ಕಲೆ, ಆಟೋಟಗಳಲ್ಲಿ ಬಾಲ್ಯದಿಂದಲೇ ತೊಡಗಿದ್ದರು. ಗದುಗಿನ ಖ್ಯಾತ ಮುದ್ರಣೋದ್ಯಮಿ ವಿನಯ್ ಕುಮಾರ್ ಜಗತಾಪರವರ ಧರ್ಮಪತ್ನಿಯಾಗಿರುವ ಅಶ್ವಿನಿಯವರು, ಸಮಾಜದ ಒಳಿತಿಗಾಗಿ ಕಾರ್ಯನಿರ್ವಹಿಸುವ ದೃಢ ಇಚ್ಛಾಶಕ್ತಿಯೊಂದಿಗೆ ಈ ಸ್ಥಾನವನ್ನು ಸ್ವೀಕರಿಸಿದ್ದಾರೆ.



**ಕಾರ್ಯದರ್ಶಿ ಶಿವಲೀಲಾ ಅಕ್ಕಿ:** ಶಿರಸಿಯಿಂದ ಬಂದಿರುವ ಶಿವಲೀಲಾ ಅಕ್ಕಿ ತಮ್ಮ ಸಾಮಾಜಿಕ ಹಕ್ಕುಬದ್ಧತೆಯನ್ನು ವಿವಿಧ ಸಂಘಟನೆಗಳ ಮೂಲಕ ಸಾಧಿಸಿದ್ದಾರೆ. ಗದುಗಿನ ಟಿ.ಪಿ. ಅಕ್ಕಿಯವರ ಧರ್ಮಪತ್ನಿಯಾಗಿರುವ ಇವರು, ಜಗದ್ಗುರು ತೋಂಟದಾರ್ಯ ಮಠದ ಜಾತ್ರಾ ಸಮಿತಿಯಿಂದ ಹಿಡಿದು ಅನೇಕ ಸಾಮಾಜಿಕ ಸಂಘಟನೆಗಳ ಪ್ರಮುಖ ಸ್ಥಾನಗಳಲ್ಲಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಇವರ ಸೇವಾಭಾವ ಹೊಸ ಕಾರ್ಯಕಾರಿಣಿಗೆ ಶಕ್ತಿಯ ಸಾರವಾಗಿ ಪರಿಣಮಿಸಲಿದೆ.



**ಕೋಶಾಧ್ಯಕ್ಷೆ ಪುಷ್ಪ ಭಂಡಾರಿ:** ವಿತ್ತ ನಿಯಂತ್ರಣದ ಹಿರಿಮೆಯನ್ನು ಗೌರವಿಸುವ ಪುಷ್ಪ ಭಂಡಾರಿಯವರು ಈ ಬಾರಿ ಕೋಶಾಧ್ಯಕ್ಷರಾಗಿ ಕಾರ್ಯನಿರ್ವಹಿಸಲಿದ್ದಾರೆ. ಉತ್ತಮ ಪ್ರಭಾವ ಬೀರಿದ 2024-25ರ ಐ.ಎಸ್.ಓ ಆಗಿ ಅವರು 100 ಧ್ವಜಗಳನ್ನು ಹಸ್ತಾಂತರಿಸಿ ಗಮನ ಸೆಳೆದಿದ್ದರು. ಸಾಹಿತ್ಯ, ಯೋಗ ಮತ್ತು ಸಂಘಟನಾ ಚಟುವಟಿಕೆಗಳಲ್ಲಿ ಸಕ್ರಿಯರಾಗಿರುವ ಇವರು, ಸಮಾಜಮುಖಿ ಕಾರ್ಯಕ್ರಮಗಳಲ್ಲಿ ನಿರಂತರವಾಗಿ ತಮ್ಮನ್ನು ತೊಡಗಿಸಿಕೊಂಡಿದ್ದಾರೆ.



**ಐ.ಎಸ್.ಓ ಪೂಜಾ ಭೂಮಾ:** ಸೃಜನಾತ್ಮಕತೆ, ವ್ಯಾಪಾರ ಪ್ರಜ್ಞೆ ಮತ್ತು ಸಂಘಟನಾ ಸಾಮರ್ಥ್ಯದ ಸಮನ್ವಯತೆಯೊಂದಿಗೆ ಪೂಜಾ ಭೂಮಾ ಈ ವರ್ಷ ಇಂಟರ್‌ನಲ್ ಸರ್ವೀಸ್ ಆಫೀಸರ್ ಆಗಿದ್ದಾರೆ. ಶುಭಂ ಜ್ಯುವೆಲರ್ಸ್‌ನ ಮಾಲಕಿಯಾಗಿ ಉದ್ಯಮ ನಿರ್ವಹಿಸುತ್ತಿರುವ ಇವರು, ಓದು ಮತ್ತು ಚಿತ್ರಕಲೆಗಳಲ್ಲಿ ಅದಮ್ಯ ಆಸಕ್ತಿಯನ್ನಿಟ್ಟುಕೊಂಡಿದ್ದಾರೆ. ಕಳೆದ ದಶಕದಿಂದ ಕ್ಲಬ್‌ನೊಂದಿಗೆ ಸಕ್ರಿಯವಾಗಿ ಬೆಸೆದುಕೊಂಡಿರುವ ಇವರ ಸಾಧನೆ ಶ್ಲಾಘನೀಯವಾಗಿದೆ.



**ಸಂಪಾದಕಿ ವೀಣಾ ಕಾವೇರಿ:** ಲೇಖನ, ಓದು, ಶಿಕ್ಷಣ ಮತ್ತು ಸಂಘಟನಾ ಜೀವನದಲ್ಲಿ ಸಮಾನ ಪ್ರೀತಿ ಹೊಂದಿರುವ ವೀಣಾ ಕಾವೇರಿ ಅವರು ಈ ಬಾರಿ ಕ್ಲಬ್‌ನ ಸಂಪಾದಕರಾಗಿ ಆಯ್ಕೆಗೊಂಡಿದ್ದಾರೆ. ಗಣಿತ ಶಿಕ್ಷಕಿ ಹಾಗೂ ಉಪನ್ಯಾಸಕಿಯಾಗಿ ಸೇವೆ ಸಲ್ಲಿಸಿದ ಇವರು, ಉತ್ತಮ ಸಂವಹನ ಕೌಶಲ್ಯ ಹಾಗೂ ವೃತ್ತಿಪರ ಮನೋಭಾವನೆಯಿಂದ ಕಾರ್ಯ ನಿರ್ವಹಿಸುತ್ತಿದ್ದಾರೆ.

ಇನ್ನರ್ ವೀಲ್ ಸಂಸ್ಥೆಯು ಮಹಿಳಾ ಸಾಮರ್ಥ್ಯ, ಶಿಕ್ಷಣ, ಆರೋಗ್ಯ ಮತ್ತು ಸಾಮಾಜಿಕ ಉದ್ದೇಶಗಳಿಗಾಗಿ ನಿರಂತರವಾಗಿ ಕೆಲಸ ಮಾಡುತ್ತಿರುವ ಮಹತ್ವದ ವೇದಿಕೆಯಾಗಿದೆ. ಈ ಹೊಸ ತಂಡದಿಂದ ಗದಗ-ಬೆಟಗೇರಿ ಘಟಕವು ಹೊಸ ಉತ್ಸಾಹ, ನವ ಚೇತನದೊಂದಿಗೆ ಇನ್ನಷ್ಟು ಕ್ರಿಯಾಶೀಲತೆಯತ್ತ ಹೆಜ್ಜೆ ಹಾಕಲಿದೆ.

# ಸಿಗಂದೂರು ಸೇತುವೆಗೆ ಚೌಡೇಶ್ವರಿ ದೇವಿ ಹೆಸರು ನಾಮಕರಣ!

**■ವಿಜಯಸಾಕ್ಷಿ ಸುದ್ದಿ, ಶಿವಮೊಗ್ಗ**

ಶರಾವತಿ ಹಿನ್ನೀರಿನ ನದಿ ಪಾತ್ರದ ಜನರು ಸೇತುವೆ ಲೋಕಾರ್ಪಣೆಗೊಂಡ ಖುಷಿಯಲ್ಲಿದ್ದಾರೆ. ನಮ್ಮದು ದ್ವೀಪವಲ್ಲ, ನಮ್ಮೂರಿಗೆ ಸಂಪರ್ಕದ ಕೊಂಡಿ ಸಿಕ್ಕಿದೆ ಎನ್ನುವ ಸಂತಸ ಅಲ್ಲಿನ ಜನರಲ್ಲಿ ಮನೆ ಮಾಡಿದೆ. ಹೌದು ಶಿವಮೊಗ್ಗ ಜಿಲ್ಲೆಯ ಸಾಗರ ತಾಲೂಕಿನಲ್ಲಿರುವ ಸಿಗಂದೂರು ಸೇತುವೆಯನ್ನು ಕೇಂದ್ರ ಸಚಿವ ನಿತಿನ್ ಗಡ್ಕರಿ ಸೋಮವಾರ ಉದ್ಘಾಟಿಸಿದರು.



ಈ ವೇಳೆ ಮಾತನಾಡಿದ ಅವರು, ಸೇತುವೆಗೆ ಸಿಗಂದೂರು ಚೌಡೇಶ್ವರಿ ದೇವಿ ಸೇತುವೆ ಎಂದು ನಾಮಕರಣ ಮಾಡಲಾಗಿದೆ ಎಂದು ಘೋಷಿಸಿದರು. ಸಾಗರ ಪಟ್ಟಣದ ನೆಹರು ಮೈದಾನದಲ್ಲಿ ನಡೆದ ಕಾರ್ಯಕ್ರಮ ಉದ್ದೇಶಿಸಿ ಸಚಿವ ನಿತಿನ್ ಗಡ್ಕರಿ ಮಾತನಾಡಿದರು.

ಸಿಗಂದೂರು ಚೌಡೇಶ್ವರಿ ದೇವಿ ಸೇತುವೆ ನಿರ್ಮಾಣಕ್ಕೆ ನಾನೇ ಭೂಮಿಪೂಜೆ ಮಾಡಿದ್ದೆ. ಇದೀಗ, ನಾನೇ ಉದ್ಘಾಟನೆ ಮಾಡಿದ್ದು ನನ್ನ ಸೌಭಾಗ್ಯ ಎಂದು ಹೇಳಿದರು. ಕನ್ಯಾಕುಮಾರಿಯಿಂದ ಕಾಶ್ಮೀರದವರೆಗೆ ನೂತನ ಹೆದ್ದಾರಿ ನಿರ್ಮಾಣ ಮಾಡಿದ್ದೇವೆ. ಬೆಂಗಳೂರು-ಚೆನ್ನೈ ರಾಷ್ಟ್ರೀಯ ಹೆದ್ದಾರಿ ಕಾಮಗಾರಿ ನಡೆಯುತ್ತಿದೆ. ಶಿವಮೊಗ್ಗ-ತುಮಕೂರು ಹೆದ್ದಾರಿ ಕಾಮಗಾರಿ ನಡೆಯುತ್ತಿದೆ. ಹುಬ್ಬಳ್ಳಿ-ಧಾರವಾಡ ಹೆದ್ದಾರಿ ಕಾಮಗಾರಿ ಶೀಘ್ರದಲ್ಲೇ ಪೂರ್ಣ ಆಗಲಿದೆ ಎಂದು ತಿಳಿಸಿದರು.

### ಸೂಡಿ ಗ್ರಾ.ಪಂನಲ್ಲಿ ನಾಟಕೀಯ ಬೆಳವಣಿಗೆ । ಕಾಂಗ್ರೆಸ್ ಬೆಂಬಲಿತ ಸದಸ್ಯರುಗಳ ರಾಜೀನಾಮೆ

# ನಕ್ಕ ಕಮಲ; ನಲುಗಿದ ಕೈ!

**■ವಿಜಯಸಾಕ್ಷಿ ಸುದ್ದಿ, ರೋಣ**

ತಾಲೂಕಿನ ಸೂಡಿ ಗ್ರಾ.ಪಂಚಾಯತಿಯ ತೆರವಾದ ಅಧ್ಯಕ್ಷ ಸ್ಥಾನಕ್ಕೆ ಸೋಮವಾರ ಚುನಾವಣೆ ನಡೆಯಿತು. ತೀವ್ರ ಕುತೂಹಲ ಕೆರಳಿಸಿದ್ದ ಚುನಾವಣೆಯಲ್ಲಿ ಕೈ ಬೆಂಬಲಿತ ಅಭ್ಯರ್ಥಿ ಮುಖಭಂಗವನ್ನು ಅನುಭವಿಸಿದ್ದು, ಕೊನೆಗೆ ಕಾಂಗ್ರೆಸ್ ಬೆಂಬಲಿತ 11 ಸದಸ್ಯರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡುವ ಮೂಲಕ ಆಡಳಿತ ವ್ಯವಸ್ಥೆಯಿಂದ ಹಿಂದೆ ಸರಿದಿದ್ದಾರೆ.




ಈ ಹಿಂದೆ ಗ್ರಾ.ಪಂ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದ ಖಾದರಬಿ ಮುಜಾವರ (ಡಾಲಾಯತ) ತಮ್ಮ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದ ಹಿನ್ನೆಲೆಯಲ್ಲಿ ಸೋಮವಾರ ಚುನಾವಣೆ ನಿಗದಿಯಾಗಿತ್ತು. ಸೂಡಿ ಗ್ರಾ.ಪಂ ಒಟ್ಟು 17 ಸದಸ್ಯರ ಬಲವನ್ನು ಹೊಂದಿದ್ದು, ಅದರಲ್ಲಿ 11 ಕಾಂಗ್ರೆಸ್ ಬೆಂಬಲಿತ ಸದಸ್ಯರು, 6 ಜನ ಬಿಜೆಪಿ ಬೆಂಬಲಿತ ಸದಸ್ಯರಿದ್ದರು. ಸಂಖ್ಯಾಬಲವಿದ್ದರೂ ಕಾಂಗ್ರೆಸ್ ಅಭ್ಯರ್ಥಿ ಸೋಲು ಅನುಭವಿಸಿದ್ದು ತೀವ್ರ ಚರ್ಚೆಗೆ ಕಾರಣವಾಗಿದೆ.

ತೆರವಾದ ಅಧ್ಯಕ್ಷ ಸ್ಥಾನಕ್ಕೆ ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿಯಾಗಿ ಗಂಗವ್ವ ಗೊರವರ ನಾಮಪತ್ರ ಸಲ್ಲಿಸಿದರೆ, ಬಿಜೆಪಿ ಬೆಂಬಲಿತ ಅಭ್ಯರ್ಥಿಯಾಗಿ ಆಶಾಬೇಗಂ ಮೊಕಾಶಿ ಎಂಬುವರು ನಾಮಪತ್ರ ಸಲ್ಲಿಸಿದರು. ನಂತರ ನಡೆದ ಬೆಳವಣಿಗೆಯಲ್ಲಿ ಬಿಜೆಪಿ ಬೆಂಬಲಿತ ಅಭ್ಯರ್ಥಿ ಆಶಾಬೇಗಂ ಮೊಕಾಶಿ 9 ಮತಗಳನ್ನು ಪಡೆದು ಗೆದ್ದು ಬೀಗಿದರು. ಸ್ಪಷ್ಟ ಬಹುಮತ ಹೊಂದಿದ್ದರೂ ಸಹ ಕಾಂಗ್ರೆಸ್ ಅಭ್ಯರ್ಥಿ ಗಂಗವ್ವ ಗೊರವರ ಪರಾಭವಗೊಂಡರು.

ಸ್ಪಷ್ಟ ಬಹುಮತ ಹೊಂದಿದ್ದರೂ ಕಾಂಗ್ರೆಸ್ ಅಭ್ಯರ್ಥಿ ಪರಾಭವಗೊಂಡಿದ್ದು ಕಾಂಗ್ರೆಸ್ ಮುಖಂಡರಲ್ಲಿ ಮುಜುಗರ ತರಿಸಿತು. ಈ ಹಿನ್ನೆಲೆಯಲ್ಲಿ ಕಾಂಗ್ರೆಸ್ ಬೆಂಬಲಿತ ಸದಸ್ಯರು ತಮ್ಮ ಸ್ಥಾನಗಳಿಗೆ ರಾಜೀನಾಮೆ ನೀಡಿ ಆಡಳಿತ ವ್ಯವಸ್ಥೆಯಿಂದ ದೂರ ಉಳಿದಿದ್ದಾರೆ.

## ಟೆಕ್ಸಾಸ್ ಕಂಪನಿಯ ಕಾರ್ಯ ಶ್ಲಾಘನೀಯ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಬೆಂಗಳೂರಿನ ಟೆಕ್ಸಾಸ್ ಇನ್‌ಸ್ಟ್ರುಮೆಂಟ್ಸ್ ಕಂಪನಿಯಿಂದ ಪಟ್ಟಣದ ಸರ್ಕಾರಿ ಮಾದರಿ ಪ್ರಾಥಮಿಕ ಹೆಣ್ಣು ಮಕ್ಕಳ ಶಾಲೆಯಲ್ಲಿ ವಿದ್ಯಾರ್ಥಿಗಳಿಗೆ ಸ್ಕೂಲ್ ಬ್ಯಾಗ್ ಮತ್ತು ಕಲಿಕಾ ಸಾಮಗ್ರಿಗಳನ್ನು ವಿತರಿಸಲಾಯಿತು.

ಪುರಸಭೆ ಸದಸ್ಯ ರಾಜೇಶ ಕುಂಬಿ ಕಲಿಕಾ ಸಾಮಗ್ರಿಗಳನ್ನು ವಿತರಿಸಿ ಮಾತನಾಡಿ, ಕನ್ನಡ ಶಾಲೆಗಳನ್ನು ಉಳಿಸಿ, ಬೆಳೆಸುವುದು ಪ್ರತಿಯೊಬ್ಬ ಕನ್ನಡಿಗನ ಕರ್ತವ್ಯವಾಗಿದೆ. ಇಂಗ್ಲಿಷ್ ಭಾಷೆಗೆ ಮರುಳಾಗಿರುವ ಪಾಲಕರು ತಮ್ಮ ಮಕ್ಕಳನ್ನು ಕನ್ನಡ ಶಾಲೆಗಳಿಗೆ ಕಳುಹಿಸಲು ಹಿಂದೇಟು ಹಾಕಬಾರದು. ಕನ್ನಡ ಶಾಲೆಗಳಲ್ಲಿಯೇ ಕಲಿತವರು ಮುಂದೆ ಉನ್ನತ ಹುದ್ದೆಗಳಲ್ಲಿ ಸೇವೆ ಸಲ್ಲಿಸುವುದನ್ನು ಕಾಣುತ್ತಿದ್ದೇವೆ. ಪಾಲಕರು ಕನ್ನಡ ಶಾಲೆ ಎಂದು ಮೂಗು ಮುರಿಯದೇ ಅಲ್ಲಿಗೆ ಮಕ್ಕಳನ್ನು ಕಳುಹಿಸಬೇಕು ಎಂದರು.

ತಾಲೂಕು ಮಕ್ಕಳ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ನಾಗರಾಜ ಹಣಗಿ ಮಾತನಾಡಿ, ಕನ್ನಡ ಶಾಲೆಗಳನ್ನು ಉಳಿಸುವ ನಿಟ್ಟಿನಲ್ಲಿ ಟೆಕ್ಸಾಸ್ ಕಂಪನಿಯವರು ಸರ್ಕಾರಿ ಶಾಲಾ ಮಕ್ಕಳಿಗೆ ಸ್ಕೂಲ್ ಬ್ಯಾಗ್ ಮತ್ತು ಕಲಿಕಾ ಸಾಮಗ್ರಿ ಕೊಡುತ್ತಿರುವುದ ಖುಷಿ ತಂದಿದೆ. ಎಲ್ಲ ಕಂಪನಿಗಳು ಮತ್ತು ಸಂಘ-ಸಂಸ್ಥೆಗಳು ಕನ್ನಡ ಶಾಲೆಗಳನ್ನು ಉಳಿಸಲು ಪ್ರಯತ್ನಿಸಬೇಕಾದ ಪರಿಸ್ಥಿತಿ ನಿರ್ಮಾಣ ಆಗಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಮುಖ್ಯ ಶಿಕ್ಷಕ ಬಿ.ಎಂ. ಕುಂಬಾರ ಮಾತನಾಡಿ, ಟೆಕ್ಸಾಸ್ ಕಂಪನಿಯವರು ಪ್ರತಿ ವರ್ಷ ನೂರಾರು ಮಕ್ಕಳಿಗೆ ಕಲಿಕಾ ಸಾಮಗ್ರಿಗಳನ್ನು ವಿತರಿಸುತ್ತಿರುವುದು ಶ್ಲಾಘನೀಯ ಕೆಲಸ ಎಂದರು ಹೇಳಿದರು.

ಸಿಆರ್‌ಪಿಗಳಾದ ಉಮೇಶ ನೇಕಾರ, ಸತೀಶ ಬೋಮಲೆ, ಶಿಕ್ಷಕಿ ಎಚ್.ಡಿ. ನಿಂಗರೆಡ್ಡಿ ಮಾತನಾಡಿದರು. ಈ ಸಂದರ್ಭದಲ್ಲಿ ಟೆಕ್ಸಾಸ್ ಕಂಪನಿ ಸಿಬ್ಬಂದಿ, ಭಾವನಾ, ಮಹೇಶ, ಎಸ್‌ಡಿಎಂಸಿ ಅಧ್ಯಕ್ಷ ಮಲ್ಲೇಶಪ್ಪ ಬಸಾಪುರ, ಉಪಾಧ್ಯಕ್ಷೆ ನಿಖಿತಾ ಶೇರಖಾನೆ, ಶಿಕ್ಷಕ ಸಿಬ್ಬಂದಿ ಇದ್ದರು.




## ಪಂಚಮಸಾಲಿ ಯುವ ಘಟಕದಿಂದ ವಿಜಯೋತ್ಸವ



**■ವಿಜಯಸಾಕ್ಷಿ ಸುದ್ದಿ, ಗದಗ**

2024ರ ಡಿಸೆಂಬರ್ 10ರಂದು ಬೆಳಗಾವಿ ಸುವರ್ಣಸೌಧ ಮುಂಭಾಗದಲ್ಲಿ ಲಿಂಗಾಯತ ಪಂಚಮಸಾಲಿ ಸಮಾಜದ 2ಎ ಮೀಸಲಾತಿ ಹೋರಾಟಗಾರರ ಮೇಲೆ ಲಾಠಿ ಚಾರ್ಜ್ ಪ್ರಕರಣದ ನ್ಯಾಯಾಂಗ ತನಿಖೆಗೆ ತಡೆ ನೀಡಬೇಕು ಎಂದು ರಾಜ್ಯ ಸರ್ಕಾರ ಸಲ್ಲಿಸಿದ್ದ ಅರ್ಜಿಯನ್ನು ಹೈಕೋರ್ಟ್ ತಿರಸ್ಕರಿಸಿ, ಪ್ರಕರಣದ ನ್ಯಾಯಾಂಗ ತನಿಖೆ ನಡೆಸಬೇಕೆಂಬ ಆದೇಶವನ್ನು ಧಾರವಾಡ ಹೈಕೋರ್ಟ್ ಎತ್ತಿ ಹಿಡಿದಿದೆ.

ಕ'ೂಡ'ಲಸ'ಂಗ'ವ'ು ಮಹಾಪೀಠದ ಜಗದ್ಗುರು ಲಿಂಗಾಯತ ಪಂಚಮಸಾಲಿ ಪರಮಪೂಜ್ಯರಾದ ಪ್ರಥಮ ಜಗದ್ಗುರು ಶ್ರೀ ಬಸವಜಯ ಮೃತ್ಯುಂಜಯ ಶ್ರೀಗಳ, ಎಲ್‌ಪಿಎಪಿ ವಕೀಲರ ಸಂಘ ಮತ್ತು ರಾಜ್ಯದ ಲಿಂಗಾಯತ ಪಂಚಮಸಾಲಿ ಹೋರಾಟಗಾರರು ಹಾಗೂ ಸಮಾಜ ಬಾಂಧವರೆಲ್ಲರ ಪರಿಶ್ರಮವನ್ನು ಸ್ಮರಿಸಿ ನಗರದಲ್ಲಿ ಜಿಲ್ಲಾ ಲಿಂಗಾಯತ ಪಂಚಮಸಾಲಿ ಸಮಾಜದ ಯುವ ಘಟಕದ ವತಿಯಿಂದ ವಿಜಯೋತ್ಸವ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಅಖಿಲ ಭಾರತ ಲಿಂಗಾಯತ ಪಂಚಮಸಾಲಿ ಸಮಾಜದ ಗದಗ ಜಿಲ್ಲಾ ಯುವ ಘಟಕದ ಅಧ್ಯಕ್ಷ ಅಯ್ಯಪ್ಪ ಮ.ಅಂಗಡಿ, ಉಪಾಧ್ಯಕ್ಷ ಬಸವರಾಜ ಗಡ್ಡೆಪ್ಪನವರ, ಪದಾಧಿಕಾರಿಗಳಾದ ನಿಂಗಪ್ಪ ಹುಗ್ಗಿ, ಕೆ.ವಿ. ಗದುಗಿನ, ಚನ್ನವೀರಪ್ಪ ಮಳಗಿ, ನಗರಸಭೆ ಸದಸ್ಯ ಮಾಹಾಂತೇಶ ನಲವಡಿ, ಶಿವರಾಜಗೌಡ ಹಿರೇಮನಿ (ಪಾಟೀಲ), ಗ್ರಾಮೀಣ ಅಧ್ಯಕ್ಷರಾದ ಮಂಜುನಾಥ ಗುಡದೂರ, ರಾಜು ಜಕ್ಕನಗೌಡ್ರ, ಚೇತನ ಅಬ್ಬಿಗೇರಿ, ಚಂದ್ರು ಪಾಟೀಲ, ಪ್ರಶಾಂತ ನೇರಗಲ್ಲ, ಮಂಜು ಬಾಣದ, ರಾಜು ರೊಟ್ಟಿ, ಸಂಗಮೇಶ ಗೂಂದಿ, ನಿಂಗನಗೌಡ ಮಾಲಿಪಾಟೀಲ, ಸಂತೋಷ ಕೊಪ್ಪದ, ಶರಣಪ್ಪ ಮರಿಗೌಡ್ರ, ಅಶೋಕ ತೋಟದ ಮುಂತಾದವರಿದ್ದರು.

# ಚಾಲಕನ ನಿಯಂತ್ರಣ ತಪ್ಪಿ ಜಲಪಾತಕ್ಕೆ ಬಿದ್ದ ಕಾರು!



■ವಿಜಯಸಾಕ್ಷಿ ಸುದ್ದಿ, ಹಾಸನ

ಹಾಸನ ಜಿಲ್ಲೆ ಸಕಲೇಶಪುರ ತಾಲೂಕಿನ ಶಿರಾಡಿಘಾಟ್ ರಸ್ತೆಯಲ್ಲಿ ಚಾಲಕನ ನಿಯಂತ್ರಣ ತಪ್ಪಿ ಕಾರೊಂದು ಜಲಪಾತಕ್ಕೆ ಬಿದ್ದಿದ್ದು ಅದೃಷ್ಟವಶಾತ್ ಕಾರಿನಲ್ಲಿದ್ದವರು ಪ್ರಾಣಾಪಾಯದಿಂದ ಪಾರಾ ಗಿರುವ ಘಟನೆ ಜರುಗಿದೆ.

ಕಾರು ನಿಲ್ಲಿಸುವಾಗ ಚಾಲಕನ ನಿಯಂತ್ರಣ ತಪ್ಪಿ ರಾಷ್ಟ್ರೀಯ ಹೆದ್ದಾರಿ ಪಕ್ಕದ ಫಾಲ್ಸ್‌ಗೆ ಕಾರು ಉರುಳಿ ಬಿದ್ದಿದ್ದು, ಚಾಲಕನಿಗೆ ಸಣ್ಣಪುಟ್ಟ ಗಾಯಗಳಾಗಿವೆ. ಮಲೆನಾಡು ಭಾಗದಲ್ಲಿ ಬಾರಿ ಮಳೆಯಿಂದ ಕಿರು ಜಲಪಾತಗಳು ತುಂಬಿ ಹರಿಯುತ್ತಿದ್ದು, ಬಾರಿ ಅನಾಹುತ ತಪ್ಪಿದಂತಾಗಿದೆ.

ಘಟನಾ ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಸಕಲೇಶಪುರ ಗ್ರಾಮಾಂತರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

## ಬೆಂಗಳೂರು: ಪಬ್‌ಗಳಲ್ಲಿ ಡ್ರಗ್ಸ್ ಪೆಡ್ಲಿಂಗ್ ದಂಧೆ – ಇಬ್ಬರು ವಿದೇಶಿಗರು ಸಿಸಿಬಿ ಬಲೆಗೆ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ವಿದೇಶಿಯರ ಪ್ರಾದೇಶಿಕ ನೋಂದಣಿ ಕಚೇರಿ ಮತ್ತು ನಗರ ಪೊಲೀಸರು ಜಂಟಿ ಕಾರ್ಯಾಚರಣೆ ನಡೆಸಿ, ಎಂಜಿ ರಸ್ತೆ ಮತ್ತು ಕೋರಮಂಗಲದ ಇಬ್ಬರು ವಿದೇಶಿ ಡಿಜೆಗಳನ್ನು ಡ್ರಗ್ಸ್ ಪೆಡ್ಲಿಂಗ್ ಆರೋಪದ ಮೇಲೆ ಬಂಧಿಸಿದ್ದಾರೆ. ಸಿಸಿಬಿ ಅಧಿಕಾರಿಗಳಿಗೆ ನಗರದಲ್ಲಿ ನಡೆಯುತ್ತಿರುವ ಐಷಾರಾಮಿ ಟೆಕ್ನೋ ಪಾರ್ಟಿಗಳಲ್ಲಿ ಡ್ರಗ್ಸ್‌ಗಳ ಬಳಕೆ ಮತ್ತು ವಿತರಣೆಯ ಮಾಹಿತಿ ಸಿಕ್ಕಿತ್ತು. ಈ ಹಿನ್ನೆಲೆ, ಡಿಜೆಗಳಾಗಿ ಪಬ್ ಗಳಲ್ಲಿ ಕೆಲಸ ಮಾಡುತ್ತಿದ್ದ ಇಬ್ಬರು ವಿದೇಶಿಗರನ್ನು ಪತ್ತೆಹಚ್ಚಿ ಬಂಧಿಸಲಾಗಿದೆ. ಆರೋಪಿಗಳು ಪಬ್‌ಗಳಿಂದಲೇ ಯುವಕರನ್ನು ಸಂಪರ್ಕ ಮಾಡಿ ಡ್ರಗ್ಸ್ ರವಾನಿಸುತ್ತಿದ್ದರು.

### ಶ್ರವಣಬೆಳಗೊಳದ ಚಾರುಕೀರ್ತಿ ಭಟ್ಟಾಚಾರ್ಯ ಪಂಡಿತಾಚಾರ್ಯ ಸ್ವಾಮೀಜಿಗಳಿಂದ ಲಕ್ಕುಂಡಿ ಸ್ಮಾರಕಗಳ ವೀಕ್ಷಣೆ

# ಜೈನ ಪರಂಪರೆಯ ಸಂರಕ್ಷಣೆ ಎಲ್ಲರ ಕರ್ತವ್ಯ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

101 ದೇವಾಲಯ, 101 ಕಲ್ಯಾಣಿಗಳನ್ನು ಹೊಂದಿರುವ ಇತಿಹಾಸ ಪ್ರಸಿದ್ಧ ಲಕ್ಕುಂಡಿ ಗ್ರಾಮದಲ್ಲಿ ಜೈನ ಬಸದಿಗಳನ್ನು ಅಭಿವೃದ್ಧಿಪಡಿಸುವುದರೊಂದಿಗೆ ಅವುಗಳ ಸಂರಕ್ಷಣೆಗೆ ಕಂಕಣಬದ್ಧರಾಗಿ ನಿಂತಿರುವ ಪ್ರವಾಸೋದ್ಯಮ ಇಲಾಖೆಯ ಕಾರ್ಯ ಶ್ಲಾಘನೀಯ ಎಂದು ಶ್ರವಣಬೆಳಗೋಳದ ಚಾರುಕೀರ್ತಿ ಭಟ್ಟಾಚಾರ್ಯ ಪಂಡಿತಾಚಾರ್ಯ ಸ್ವಾಮೀಜಿ ಹೇಳಿದರು.

ಇಲ್ಲಿಯ ಪ್ರಾಚೀನ ಸ್ಮಾರಕಗಳನ್ನು ವೀಕ್ಷಿಸಿ ಮಾತನಾಡಿದ ಶ್ರೀಗಳು, ಈ ಭಾಗದಲ್ಲಿ ಹೆಚ್ಚು ಪ್ರಾಚೀನ ಸ್ಮಾರಕಗಳಿವೆ ಎಂಬುದು ಇತಿಹಾಸದ ಪುಸ್ತಕಗಳಿಂದ ತಿಳಿದಿದ್ದು, ಪ್ರವಾಸೋದ್ಯಮ ಇಲಾಖೆ, ಲಕ್ಕುಂಡಿ ಅಭಿವೃದ್ಧಿ ಪ್ರಾಧಿಕಾರ ಹಾಗೂ ಪುರಾತತ್ವ ಇಲಾಖೆಯು ಅವುಗಳ ರಕ್ಷಣೆಗೆ ಮುಂದಾಗಿರುವುದು ಶ್ಲಾಘನೀಯ. ಈ ಯುಗದಲ್ಲಿ 6 ಕಾಲಚಕ್ರಗಳು ಬರುತ್ತವೆ. ಅದರಂತೆ ಇದು ಪಂಚಮಕಾಲವಾಗಿದೆ. ಇಲ್ಲಿರುವ ಜೈನ ಬಸದಿಯಲ್ಲಿ ನೇಮಿನಾಥ ತೀರ್ಥಂಕರ ಮೂರ್ತಿಯಿದೆ. ಪ್ರಾಚೀನ ಕಾಲದಿಂದಲೂ 24 ತೀರ್ಥಂಕರರು ಆಳಿದ್ದು ಕೊನೆಯದಾಗಿ ಭಗವಾನ ಮಹಾವೀರರು ರಾಜರಾಗಿದ್ದರು.

ಭೂತಕಾಲದಿಂದ ಭವಿಷ್ಯತ್ ಕಾಲದವರೆಗೂ 24 ತೀರ್ಥಂಕರರು ಇದ್ದೇ ಇರುತ್ತಾರೆ ಎಂದು ಜೈನ ಸಿದ್ಧಾಂತಗಳು ಹೇಳುತ್ತವೆ. ಇಲ್ಲಿ ದೊರೆತ ಅವಶೇಷಗಳಲ್ಲಿ ಜೈನ ಶಾಸನಗಳು, ಮೂರ್ತಿಗಳು, ಶಿಲ್ಪ ಕಲೆಗಳಿವೆ. ದೇಶಾದ್ಯಂತ ಜೈನ ಮಂದಿರಗಳು, ಸ್ಮಾರಕಗಳು, ಕಾಣಸಿಗುತ್ತವೆ. ಭಾರತವು ಹಿಂದಿನಿಂದಲೂ ಸಂಪದ್ಭರಿತ ನಾಡಾಗಿದ್ದು, ಇಲ್ಲಿಯ ಶಿಲ್ಪ ಕಲೆ, ಸಂಸ್ಕೃತಿಯು ಜೈನ ರಾಜರ ನೆಲೆಯಾಗಿತ್ತು.



ವಿದೇಶೀಯರು ಈ ಜೈನ ಧರ್ಮದ ಮೇಲೆ ಅಕ್ರಮಣ ಮಾಡಿ ನಾಶ ಮಾಡಿದ್ದಾರೆ. ಕನ್ನಡ ಸಾಹಿತ್ಯದಲ್ಲಿ ಪಂಪ, ರನ್ನ, ಪೊನ್ನ ಮತ್ತು ಚನ್ನ ಕವಿಗಳು ಕನ್ನಡಕ್ಕಾಗಿ ತಮ್ಮ ಅಮೋಘ ಕೊಡುಗೆಯನ್ನು ನೀಡಿದ್ದಾರೆ. ಜೈನರ ಪರಂಪರೆ, ಸಂಸ್ಕೃತಿಯನ್ನು ಸಂರಕ್ಷಣೆ ಮಡುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ.

ಕಳೆದ ವಾರ ಶ್ರವಣಬೆಳಗೋಳಕ್ಕೆ ಭೇಟಿ ನೀಡಿದ್ದ ಪ್ರವಾಸೋದ್ಯಮ ಸಚಿವರು ನಮ್ಮ ಕ್ಷೇತ್ರವನ್ನು ಅಭಿವೃದ್ಧಿಪಡಿಸುವ ಇಂಗಿತವನ್ನು ತಿಳಿಸಿದ್ದಾರೆ. ಪ್ರಾಚೀನ ಸ್ಮಾರಕಗಳ ಬಗ್ಗೆ ಅವರಿಗಿರುವ ಕಾಳಜಿ ಹಿರಿದು ಎಂದರು.

ಚಾರುಕೀರ್ತಿ ಭಟ್ಟಾಚಾರ್ಯರು ಹಾಗೂ ವರೂರು ಕ್ಷೇತ್ರದ ಅಮೀನಭಾವಿಯ ಧರ್ಮಸೇನಾ ಪಟ್ಟಾಧ್ಯಕ್ಷರನ್ನು ಲಕ್ಕುಂಡಿ ಅಭಿವೃದ್ಧಿ ಪ್ರಾಧಿಕಾರದ ರಾಜ್ಯ ಸದಸ್ಯ, ಜಿ.ಪಂ ಮಾಜಿ ಅಧ್ಯಕ್ಷ ಸಿದ್ಧಲಿಂಗೇಶ್ವರ ಪಾಟೀಲ ಸನ್ಮಾನಿಸಿ ಗೌರವಿಸಿದರು. ಪ್ರವಾಸೋದ್ಯಮ ಇಲಾಖೆಯ ನಿರ್ದೇಶಕ ಕೊಟ್ರೇಶ ವಿಭೂತಿ, ಗದಗ ಜಿಲ್ಲಾ ಜೈನ ಸಮಾಜದ ಅಧ್ಯಕ್ಷ ಬಿ.ಎ. ಕುಲಕರ್ಣಿ, ಅಜ್ಜಪ್ಪಗೌಡ ಪಾಟೀಲ, ಗ್ರಾ.ಪಂ ಮಾಜಿ ಸದಸ್ಯ ಅಣ್ಣಪ್ಪ ಬಸ್ತಿ ಇದ್ದರು.

ಬ್ರಹ್ಮಜಿನಾಲಯ, ನಾಗನಾಥ, ನನ್ನೇಶ್ವರ, ಕಾಶಿ ವಿಶ್ವನಾಥ ಹಾಗೂ ಮುಸ್ಕಿನಭಾವಿಯಲ್ಲಿರುವ ಶಿಲ್ಪಕಲೆ ಹಾಗೂ ಪ್ರಾಚ್ಯಾವಶೇಷಗಳ ವಸ್ತು ಸಂಗ್ರಾಲಯವನ್ನು ವೀಕ್ಷಿಸಿದ ಶ್ರೀಗಳು, ಶಿಲ್ಪಕಲೆಯ ಇತಿಹಾಸವನ್ನು ಇತಿಹಾಸ ತಜ್ಞ ಅ.ದ. ಕಟ್ಟಿಮನಿಯವರಿಂದ ತಿಳಿದುಕೊಂಡು ಸಂತಸಪಟ್ಟರು. ಲಕ್ಕುಂಡಿ ಅಭಿವೃದ್ಧಿ ಪ್ರಾಧಿಕಾರದ ಆಯುಕ್ತ ಶರಣು ಗೋಗೇರಿ, ಲಕ್ಕುಂಡಿಯಲ್ಲಿ ಅಭಿವೃದ್ಧಿಪಡಿಸುತ್ತಿರುವ ಸ್ಮಾರಕಗಳು, ಪ್ರಾಚ್ಯಾವಶೇಷಗಳು ಹಾಗೂ ಉತ್ಖನನದ ಕುರಿತು ಸರಕಾರ ಕೈಗೊಂಡಿರುವ ಅಭಿವೃದ್ಧಿ ಕಾರ್ಯಗಳ ಬಗ್ಗೆ ವಿವರಿಸಿದರು.



# ಬಸ್‌ನಲ್ಲಿ ವಿದ್ಯಾರ್ಥಿಗಳಿಗೆ ಪ್ರಥಮಾದ್ಯತೆ ನೀಡಿ

■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಸರ್ಕಾರಿ ಬಸ್‌ಗಳಲ್ಲಿ ಶಾಲಾ ಮಕ್ಕಳಿಗೆ ಮೊದಲ ಆದ್ಯತೆ ನೀಡಬೇಕು. ಸಾರ್ವಜನಿಕರು ಸಹಕಾರ ನೀಡುವುದು ಅತ್ಯಗತ್ಯ ಎಂದು ಹರಪನಹಳ್ಳಿ ಕ್ಷೇತ್ರದ ಶಾಸಕಿ ಎಂ.ಪಿ. ಲತಾ ಮಲ್ಲಿಕಾರ್ಜುನ ಹೇಳಿದರು.

ನಗರದ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಲ್ಲಿ ಸೋಮವಾರ ನಡೆದ ಶಕ್ತಿ ಯೋಜನೆಯ ಎರಡು ವರ್ಷದ ಸಂಭ್ರಮಾಚರಣೆ ಕಾರ್ಯಕ್ರಮದಲ್ಲಿ ಅವರು ಭಾಗವಹಿಸಿ ಮಾತನಾಡಿದರು.

ಶಕ್ತಿ ಯೋಜನೆಯಡಿ ಹರಪನಹಳ್ಳಿಯಿಂದ ಎರಡು ವರ್ಷಗಳಲ್ಲಿ 1.40 ಕೋಟಿ ಮಹಿಳೆಯರು ಪ್ರಯಾಣ ಮಾಡಿದ್ದಾರೆ. ಇದರಿಂದ ಸರಕಾರಕ್ಕೆ 40 ಕೋಟಿಗೂ ಹೆಚ್ಚು ಲಾಭವಾಗಿದೆ. ಶಕ್ತಿ ಯೋಜನೆಯಿಂದ ಜಿಲ್ಲೆಯ ಮಹಿಳೆಯರು ಧಾರ್ಮಿಕ ಕ್ಷೇತ್ರಗಳಿಗೆ ಭೇಟಿ ನೀಡಿದ್ದು, ಈ ಯೋಜನೆಯು ಸ್ವತಂತ್ರವಾಗಿ ಸಂಚರಿಸಲು ಮಹಿಳೆಯರಿಗೆ ಸಹಕಾರಿಯಾಗಿದೆ. ಒಟ್ಟಾರೆ ರಾಜ್ಯಾದ್ಯಂತ 500 ಕೋಟಿ ಮಹಿಳೆಯರು ಪ್ರಯಾಣ ಮಾಡಿದ್ದಾರೆ ಎಂಬುದು ರಾಜ್ಯದ ಸಾಧನೆಯಾಗಿದೆ ಎಂದು ಹೇಳಿದರು.

ಮುಂದಿನ ವಾರಗಳಲ್ಲಿ ಹರಪನಹಳ್ಳಿಗೆ ಹೆಚ್ಚುವರಿಯಾಗಿ ಎರಡು ಬಸ್‌ಗಳನ್ನು ನೀಡಲು ಕ್ರಮ ಕೈಗೊಳ್ಳಲಾಗುತ್ತಿದ್ದು, ಕೇಂದ್ರ ಸಚಿವ ಕುಮಾರಸ್ವಾಮಿ ಅವರಿಗೆ 10 ಎಲೆಕ್ಟ್ರಿಕ್ ಬಸ್‌ಗಳನ್ನು ನೀಡುವಂತೆ ಮನವಿ ಮಾಡುವ ವಿಚಾರವಿದೆ ಎಂದರು.

ಕಾರ್ಯಕ್ರಮದಲ್ಲಿ ಸಾರಿಗೆ ವ್ಯವಸ್ಥಾಪಕಿ ಮಂಜುಳ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಂ.ವಿ. ಅಂಜಿನಪ್ಪ, ಚಿಗಟೇರಿ ಮಹಿಳಾ ಘಟಕದ ಅಧ್ಯಕ್ಷೆ ಭಾಗ್ಯಮ್ಮ, ಪ್ರಮುಖರಾದ ರೆಹಮಾನ್ ಸಾಬ್, ವೆಂಕಟೇಶ್ ವಕೀಲ, ಜಂಬಣ್ಣ ಮುತ್ತಿಗಿ, ದಾದಾಪೀರ್, ನಂದಿಬೇವೂರು ಅಶೋಕ್, ಬಾವಿಹಳ್ಳಿ ಚಂದ್ರಪ್ಪ, ಮತ್ತಿಹಳ್ಳಿ ರಾಮಪ್ಪ, ಕವಿತಾ, ವಿಜಯಲಕ್ಷ್ಮೀ, ಮೈದೂರು ರಾಮಣ್ಣ, ಹುಲಿಕಟ್ಟಿ ಚಂದ್ರಪ್ಪ, ಉದಯ್ ಶಂಕರ್, ಮೋರಿಗೆರೆ ಹೇಮಣ್ಣ, ದೇವೇಂದ್ರಗೌಡ, ಗುಡಿಹಳ್ಳಿ ಹಾಲೇಶ್ ಸೇರಿದಂತೆ ಇತರರು ಉಪಸ್ಥಿತರಿದ್ದರು.



# ಸಮಾಜಕ್ಕೆ ಗುರುವಿನ ಪಾತ್ರ ಅವಶ್ಯಕ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಸಮಾಜದಲ್ಲಿ ಗುರುಗಳು ಮಹತ್ತರ ಸ್ಥಾನ ಹೊಂದಿದ್ದು, ಅವರ ಮಾರ್ಗದರ್ಶನವಿಲ್ಲದೆ ಯಾವುದೇ ಕಾರ್ಯ ಯಶಸ್ವಿಯಾಗಲು ಸಾಧ್ಯವಿಲ್ಲ. ಗುರು ಜ್ಞಾನದೆಡೆಗೆ ಕಣ್ಣು ತೆರೆಸುವವನು. ಪ್ರತಿಯೊಬ್ಬರ ಯಶಸ್ಸಿನ ಹಿಂದೆ ಗುರುವಿನ ಕೃಪೆ ಅಗತ್ಯವಿದೆ ಎಂದು ಗದಗ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಕೆ.ಎ. ಬಳಿಗೇರ ಹೇಳಿದರು.

ಪಟ್ಟಣದ ಹಡಪದ ಅಪ್ಪಣ್ಣ ಸಮುದಾಯ ಭವನದಲ್ಲಿ ಮುಳಗುಂದ ಹೋಬಳಿ ಶರಣ ಸಾಹಿತ್ಯ ಪರಿಷತ್ತು ಹಾಗೂ ಕದಳಿ ಮಹಿಳಾ ವೇದಿಕೆ ಘಟಕಗಳ ಸೇವಾ ದೀಕ್ಷೆ ಹಾಗೂ ಹಡಪದ ಅಪ್ಪಣ್ಣ ಜಯಂತ್ಯುತ್ಸವದ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಗದಗ ಜಿಲ್ಲಾ ಕದಳಿ ವೇದಿಕೆ ಅಧ್ಯಕ್ಷೆ ಸುಧಾ ಹುಚ್ಚಣ್ಣವರ ಮಾತನಾಡಿ, ಹಡಪದ ಅಪ್ಪಣ್ಣ ನಿಜ ಸುಖದ ಬದುಕನ್ನು ತಮ್ಮ ಶರಣ ಸಾಹಿತ್ಯದ ಮೂಲಕ ತೋರಿಸಿಕೊಟ್ಟ ಮಹಾನ್ ಶರಣರು. ಮಕ್ಕಳಿಗೆ ಇಂತಹ ಶರಣರ ವಚನಗಳನ್ನು ಮನೆಯಲ್ಲಿ ಪಠಿಸುವ ಅಭ್ಯಾಸ ಬೆಳೆಸಬೇಕು. ಜಾತಿ, ಮತ, ಪಂಥ ಭೇದವಿಲ್ಲದ ಸಮಾನತೆಯ ಸಮಾಜ ನಿರ್ಮಿಸಲು ಶರಣರು ಸೂಚಿಸಿರುವ ಮಾರ್ಗದರ್ಶನ ಅತ್ಯಗತ್ಯ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಎಂ.ಡಿ. ಬಟ್ಟೂರ ವಹಿಸಿದ್ದರು. ಡಾ. ಎಸ್.ಸಿ. ಚವಡಿ, ಬಿ.ಕೆ. ಹರಪನಹಳ್ಳಿ, ಎಸ್.ಎಂ. ಮರಿಗೌಡರ, ರಾಮಣ್ಣಾ ಕಮಾಜಿ, ಕುಮಾರ ಹಡಪದ, ಪಿ.ಎ. ವಂಟಕರ, ಬೂದಪ್ಪ ಅಂಗಡಿ, ಶಂಕ್ರಪ್ಪ ತೆಂಬದಮನಿ, ಮಂಜುನಾಥ ಮಟ್ಟಿ, ಪ್ರಕಾಶ ಮದ್ದಿನ, ರಾಜೇಶ್ವರಿ ಬಡ್ನಿ ಮತ್ತು ಎಂ.ಕೆ. ಲಮಾಣಿ ಉಪಸ್ಥಿತರಿದ್ದರು.



# ಯಶಸ್ಸಿನ ಹಿಂದೆ ಗುರು ಕೃಪೆ ಅಗತ್ಯ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪ್ರತಿಯೊಂದು ಯಶಸ್ಸಿನ ಹಿಂದೆಯೂ ಗುರು ಕೃಪೆ ಇದ್ದೇ ಇರುತ್ತದೆ ಎಂದು ಶಿಕ್ಷಕ ಎಂ.ಎ. ಮೇಗಲಮನಿ ಹೇಳಿದರು.

ಪಟ್ಟಣದ ಸರಕಾರಿ ಮಾದರಿ ಕನ್ನಡ ಗಂಡುಮಕ್ಕಳ ಶಾಲೆ ನಂ. 1ರಲ್ಲಿ ಹಡಪದ ಅಪ್ಪಣ್ಣ ಜಯಂತಿ ಹಾಗೂ ಗುರುಪೂರ್ಣಿಮೆ ಪ್ರಯುಕ್ತ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಬದುಕಿನಲ್ಲಿ ನಾವು ಎಷ್ಟೇ ಎತ್ತರಕ್ಕೇರಿದರೂ, ಅದರ ಹಿಂದೆ ಗುರುಗಳ ಪ್ರೇರಣೆಯ ಛಾಯೆ ಇದ್ದೇ ಇರುತ್ತದೆ. ಆದ್ದರಿಂದ ಗುರುಗಳಿಗೆ ಸಮಾಜದಲ್ಲಿ ವಿಶೇಷ ಗೌರವ ನೀಡಲಾಗುತ್ತದೆ ಎಂದು ಅವರು ಹೇಳಿದರು.

ಗುರುಗಳ ಅನುಸರಣೆ ಮತ್ತು ಉಪದೇಶಗಳು ನಮ್ಮನ್ನು ಉತ್ತಮ ಪ್ರಜೆಗಳಾಗಿಸುವ ಶಕ್ತಿ ಹೊಂದಿವೆ. ಮಕ್ಕಳು ನಿತ್ಯ ಪಾಠ ಭೋಧನೆಯಲ್ಲಿ ಗುರುಗಳನ್ನು ಅನುಕರಿಸಿದರೆ, ದೇಶದ ಭವಿಷ್ಯ ಉಜ್ವಲವಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಶಾಲಾ ಪ್ರಧಾನ ಗುರು ಪಿ.ಬಿ. ಕೆಂಚನಗೌಡರ, ಎಂ.ಎ. ಕೊಪ್ಪಳ, ಎಚ್.ಆರ್. ಭಜಂತ್ರಿ, ಎಸ್.ಎಚ್. ಉಪ್ಪಾರ, ವೀಣಾ ಟಿ, ವಿ.ಎಂ. ಕಠಿ, ಎಸ್.ವಿ. ಹಿರೇಮಠ, ಎಸ್.ಡಿ. ಪಂಡಿತ, ಕೆ.ಎಂ. ಹೆರಕಲ್ಲ, ಮಂಜುನಾಥ ಕಲ್ಯಾಣಮಠ, ಶಬಾನಾ ಢಾಲಾಯತ, ರೇಣುಕಾ ಪರ್ವತಗೌಡರ, ಕವಿತಾ ಬಿನ್ನಾಳ ಮತ್ತು ರಾಧಾ ಬಾತಾಖಾನಿ ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳೊಂದಿಗೆ ಸಂವಹನ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಗದಗ

ವಾಣಿಜ್ಯ ವಿದ್ಯಾರ್ಥಿಗಳಾದ ನೀವು ಸ್ವಂತ ಪ್ರೇರೇಪಣೆಯಿಂದ ಮುನ್ನುಗ್ಗುವ ಪ್ರವೃತ್ತಿ ಬೆಳೆಸಿಕೊಂಡಲ್ಲಿ ಮಾತ್ರ ಮುನ್ನಡೆ ಅಥವಾ ಪ್ರಗತಿ ಸಾಧ್ಯ ಎಂದು ಸನ್ಮಾರ್ಗ ಪದವಿಪೂರ್ವ ಮಹಾವಿದ್ಯಾಲಯದ ನಿರ್ದೇಶಕ ಪ್ರೊ. ಉಡುಪಿ ದೇಶಪಾಂಡೆ ಅಭಿಪ್ರಾಯಪಟ್ಟರು.

ಕಾಲೇಜಿನ ವಾಣಿಜ್ಯ ವಿದ್ಯಾರ್ಥಿಗಳಿಗಾಗಿ ಬಿಂಕದಕಟ್ಟಿಯ ಪ್ರಾಣಿ ಸಂಗ್ರಹಾಲಯದಲ್ಲಿ ಜರುಗಿದ 'ಪ್ರೇರೇಪಣಾ ಮಾರ್ಗದರ್ಶನ ಮತ್ತು ವಿದ್ಯಾರ್ಥಿಗಳೊಂದಿಗೆ ಸಂವಹನ' ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡುತ್ತಾ, ವಾಣಿಜ್ಯ ವಿದ್ಯಾರ್ಥಿಗಳಾದ ನೀವು ಪಠ್ಯದ ಜೊತೆ-ಗೆ ಇಂತಹ ಪಠ್ಯೇತರ ಚಟುವಟಿಕೆಗಳಲ್ಲಿ ಭಾಗವಹಿಸುವುದರ ಮೂಲಕ ನಿಮ್ಮ ವ್ಯಕ್ತಿತ್ವವನ್ನು ಉತ್ತಮ ರೀತಿಯಲ್ಲಿ ರೂಪಿಸಿಕೊಂಡು ಜೀವನದಲ್ಲಿ ಪ್ರಗತಿ ಕಾಣಬೇಕು ಎಂದರು.

ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಪ್ರೊ. ರಾಜೇಶ ಕುಲಕರ್ಣಿ, ಪ್ರಾಚಾರ್ಯ ಪ್ರೇಮಾನಂದ ರೋಣದ, ಆಡಳಿತಾಧಿಕಾರಿ ಎಂ.ಸಿ. ಹಿರೇಮಠ, ನಿರ್ದೇಶಕರುಗಳಾದ ಪ್ರೊ. ರೋಹಿತ್ ಒಡೆಯರ್, ಪ್ರೊ. ರಾಹುಲ ಒಡೆಯರ್, ಪ್ರೊ. ಸೈಯ್ಯದ್ ಮತೀನ್ ಮುಲ್ಲಾ ಸೇರಿದಂತೆ ಮಹಾವಿದ್ಯಾಲಯದ ಬೋಧಕೇತರ ಸಿಬ್ಬಂದಿ ಹಾಗೂ ವಾಣಿಜ್ಯ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಪ್ರೊ. ಎಸ್.ಎಸ್. ವಜ್ರಬಂಡಿ ಸ್ವಾಗತಿಸಿದರು. ಕನ್ನಡ ಉಪನ್ಯಾಸಕ ಪ್ರೊ. ಹೇಮಂತ ದಳವಾಯಿ ಕಾರ್ಯಕ್ರಮ ನಿರ್ವಹಿಸಿದರು. ಪ್ರೊ. ಸಂಗೀತಾ ಬೀಳಗಿ ವಂದಿಸಿದರು.




# ನಿಧನ

## ವೀರೇಶ ಕಾಳಪ್ಪ ಹೊಸಮನಿ



ನರೇಗಲ್ಲ, 14. ಪಟ್ಟಣದ ಹಲಗೇರಿ ಓಣಿಯ ನಿವಾಸಿ, ಜೀವ ವಿಮಾ ಪ್ರತಿನಿಧಿ ಹಾಗೂ ವಿಶ್ವಕರ್ಮ ಸಮಾಜದ ಮುಖಂಡರಾಗಿದ್ದ ವೀರೇಶ ಕಾಳಪ್ಪ ಹೊಸಮನಿ (59) ರವಿವಾರ ನಿಧನರಾದರು. ಮೃತರು ಪತ್ನಿ, ಔತಈ ಪುತ್ರ, ಪುತ್ರಿ ಸೇರಿದಂತೆ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.


# ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ, ಕಾರ್ಯದರ್ಶಿಗಳಿಗೆ ಸನ್ಮಾನ

■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಸ್ವಾಮಿ ವಿವೇಕಾನಂದ ಸಭಾಭವನದಲ್ಲಿ ನಡೆದ ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಗದಗ 'ಯುವ ಧ್ವನಿ' ಕಾರ್ಯಕ್ರಮದಲ್ಲಿ ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿದ ಕೃಷ್ಣಗೌಡ ಎಚ್.ಪಾಟೀಲ್ ಹಾಗೂ ರಾಜ್ಯ ಯುವ ಕಾಂಗ್ರೆಸ್ ಸಮಿತಿ ಪ್ರಧಾನ ಕಾರ್ಯದರ್ಶಿ ಅಕ್ಷಯ ಪಾಟೀಲರಿಗೆ ತಿಮ್ಮಾಪೂರ ಗ್ರಾಮದ ಯುವಕರು ಸನ್ಮಾನಿಸಿದರು.

ಕಾಂಗ್ರೆಸ್ ಮುಖಂಡ ಯಲ್ಲಪ್ಪ ಎಚ್.ಬಾಬರಿ ಈ ಸಂದರ್ಭದಲ್ಲಿ ಮಾತನಾಡಿ, ಕಾಂಗ್ರೆಸ್ ಪಕ್ಷ ತಳಮಟ್ಟದಿಂದ ಸಂಘಟನೆ ಮಾಡಿ ಎಲ್ಲಾ ಯುವಕರಿರೂ ಅಧಿಕಾರ ನೀಡಿ ಅವರಿಗೆ ನಾಯಕತ್ವ ಗುಣ ಬೆಳೆಸಿಕೊಳ್ಳಲು ಸಹಕಾರಿಯಾಗಿದೆ. ರಾಜ್ಯದಲ್ಲಿ ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಮಾದರಿಯಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಬಾಳಪ್ಪ ಗಂಗರಾತ್ರಿ, ಶರಣಪ್ಪ ಜೋಗಿನ, ಮಲ್ಲಪ್ಪ ಕನ್ಯೇರಿ, ಹನುಮಪ್ಪ ಘಂಟಿ, ರಾಮಣ್ಣ ಖಂಡ್ರಿ ಮುಂತಾದವರಿದ್ದರು.



## ವಿಜಯಪುರದಲ್ಲಿ ಮತ್ತೆ ಹರಿದ ನೆತ್ತರು: ಯುವಕನ ಮೇಲೆ ಮಾರಾಕಸ್ತ್ರಗಳಿಂದ ದಾಳಿ!

■ವಿಜಯಸಾಕ್ಷಿ ಸುದ್ದಿ, ವಿಜಯಪುರ

ವಿಜಯಪುರ ನಗರದಲ್ಲಿ ಮತ್ತೇ ನೆತ್ತರು ಹರಿದಿದ್ದು, ಯುವಕನ ಮೇಲೆ ನಾಲ್ವರು ಯುವಕರು, ಮಾರಾಕಸ್ತ್ರಗಳಿಂದ ದಾಳಿ ಮಾಡಿದ್ದಾರೆ. ಇದರಿಂದಾಗಿ ಸುಶೀಲ್ ಕಾಳೆ ಎಂಬಾತ ಗಂಭೀರ ಗಾಯಗೊಂಡಿದ್ದಾನೆ. ಗಾಯಗೊಂಡಿರೋ ಸುಶೀಲ ಕಾಳೆ ಎಂಬಾತನಿಗೆ ನಗರದ ಖಾಸಗಿ ಆಸ್ಪತ್ರೆಗೆ ರವಾನೆ ಮಾಡಲಾಗಿದೆ.

ವಿಜಯಪುರ ನಗರದ ಅಮರ ವರ್ಷಿಣಿ ಸಹಕಾರಿ ಬ್ಯಾಂಕ್ ನಲ್ಲಿ ಈ ಘಟನೆ ಜರುಗಿದೆ. ನಗರದ ಎಸ್ ಎಸ್ ರಸ್ತೆಯ ಎಸ್ ಎಸ್ ಕಾಂಪ್ಲೆಕ್ಸ್ ನಲ್ಲಿರೋ ಸಹಕಾರಿ ಬ್ಯಾಂಕ್ ನಲ್ಲಿ ಈ ಘಟನೆ ನಡೆದಿರುವ ಹಿನ್ನೆಲೆ ಸ್ಥಳೀಯರಲ್ಲಿ ಆತಂಕ ಮೂಡಿದೆ.

**ಪತ್ರಿಕಾ ವಿತರಕರ ಕ್ಷೇಮಾಭಿವೃದ್ಧಿ ಸಂಘದ ಜಿಲ್ಲಾ ಘಟಕದಿಂದ ಪೂರ್ವಭಾವಿ ಸಭೆ**

## ಸೆ.4ರಂದು ಪತ್ರಿಕಾ ವಿತರಕರ ದಿನ ಆರಚಣೆ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಗಂಗಾಪೂರಪೇಟೆಯ ಬನಶಂಕರಿ ದೇವಸ್ಥಾನದ ಆವರಣದಲ್ಲಿ ಅಖಿಲ ಕರ್ನಾಟಕ ಪತ್ರಿಕಾ ವಿತರಕರ ಕ್ಷೇಮಾಭಿವೃದ್ಧಿ ಸಂಘದ ಗದಗ ಜಿಲ್ಲಾ ಘಟಕದ ವತಿಯಿಂದ ಜರುಗಿದ ಪೂರ್ವಭಾವಿ ಸಭೆಯಲ್ಲಿ ಸೆ. 4ರಂದು ಅಖಿಲ ಕರ್ನಾಟಕ ಪತ್ರಿಕಾ ವಿತರಕರ ದಿನ ಆಚರಿಸಲು ನಿರ್ಣಯಿಸಲಾಯಿತು.

ಸಂಘದ ಗದಗ ಜಿಲ್ಲಾಧ್ಯಕ್ಷ ವೀರಬಸಯ್ಯ ವಿರಕ್ತಮಠ ಅಧ್ಯಕ್ಷತೆ ವಹಿಸಿ ಮಾತನಾಡಿ, ಅಖಿಲ ಕರ್ನಾಟಕ ಪತ್ರಿಕಾ ವಿತರಕರ ದಿನ ಆಚರಣೆ ಕಾರ್ಯಕ್ರಮದಲ್ಲಿ ಹಿರಿಯರ ಪತ್ರಿಕಾ ವಿತರಕರಿಗೆ ಸನ್ಮಾನ, ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರಿಗೆ ಸನ್ಮಾನ ಹಾಗೂ ಎಸ್‌ಎಸ್‌ಎಲ್‌ಸಿ, ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಅತ್ಯಧಿಕ ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಗುವುದು. ಆಗಸ್ಟ್ 10ರಂದು ಪತ್ರಿಕಾ ವಿತರಕರ ಕುಟುಂಬದವರಿಗೆ ಮನರಂಜನಾ ಕಾರ್ಯಕ್ರಮ, ಆ. 20ರಂದು ಪತ್ರಿಕಾ ವಿತರಕರಿಗೆ ಕ್ರಿಕೆಟ್ ಪಂದ್ಯಾವಳಿ ಆಯೋಜಿಸಲಾಗುವುದು ಎಂದು ತಿಳಿಸಿದರು.

ಸಂಘದ ರಾಜ್ಯಾಧ್ಯಕ್ಷ ಶಂಕರ ಕುದರಿಮೋತಿ, ಸಂಘದ ಜಿಲ್ಲಾ ಉಪಾಧ್ಯಕ್ಷ ಈರಣ್ಣ ಮರ್ಳೇಕರ, ಕಾರ್ಯದರ್ಶಿ ಮಂಜುನಾಥ ಕಬನೂರ, ಸಹ ಕಾರ್ಯದರ್ಶಿ ದತ್ತಾತ್ರೇಯ ಮುಂಡರಗಿ, ಖಜಾಂಚಿ ವಿನಾಯಕ ಬದಿ, ಹಿರಿಯ ಸಲಹೆಗಾರರಾದ ಕೆ.ಎಸ್. ಹಿರೇಮಠ, ಪ್ರಮೋದ ಜೋಶಿ, ಸಂಚಾಲಕ ಗಂಗಾಧರ ಮಡ್ಡಿ, ಗಣೇಶ ಶಿರಹಟ್ಟಿ, ಶಂಕರಗುರು ಕಂದಗಲ್ಲ, ಗುರುರಾಜ ಕಲಾಲ, ದಶರಥ ಹೊನ್ನಳ್ಳಿ, ಸಿದ್ದು ಮಡಿವಾಳರ, ಕಿರಣ ಮಡ್ಡಿ, ಮಾರುತಿ ಮುಂಡರಗಿ ಸೇರಿದಂತೆ ಪತ್ರಿಕಾ ವಿತರಕರು ಭಾಗವಹಿಸಿದ್ದರು.

**ಪೊಲೀಸರ ಭರ್ಜರಿ ಕಾರ್ಯಾಚರಣೆ | ಓರ್ವ ಮಹಿಳೆ ಸೇರಿ 6 ಗಾಂಜಾ ಮಾರಾಟಗಾರರ ಬಂಧನ**

# 6.70 ಲಕ್ಷ ರೂ ಮೌಲ್ಯದ ಗಾಂಜಾ ವಶಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚಿನ ದಿನಗಳಲ್ಲಿ ಗದಗ-ಬೆಟಗೇರಿ ಅವಳಿ ನಗರದಾದ್ಯಂತ ಗಾಂಜಾ ಮಾರಾಟದ ಹಾವಳಿ ಹೆಚ್ಚಾಗಿತ್ತು. ಇದರಿಂದ ಯುವಕರು ಗಾಂಜಾ ಚಟಕ್ಕೆ ಮಾರುಹೋಗಿ ಅನೇಕ ಸಮಾಜದ್ರೋಹಿ ಕೆಲಸದಲ್ಲಿ ನಿರತರಾಗಿದ್ದರು. ಈ ಹಿನ್ನೆಲೆಯಲ್ಲಿ ಎಚ್ಚೆತ್ತ ಪೊಲೀಸರು ವಿಶೇಷ ಕಾರ್ಯಾಚರಣೆ ನಡೆಸಿ ಓರ್ವ ಮಹಿಳೆಯೂ ಸೇರಿದಂತೆ ಒಟ್ಟೂ 6 ಜನರನ್ನು ಬಂಧಿಸಿ 6.7 ಕೆ.ಜಿ ಗಾಂಜಾ ವಶಪಡಿಸಿಕೊಂಡಿದ್ದಾರೆ.

ಈ ಕುರಿತು ನಗರದ ಗ್ರಾಮೀಣ ಠಾಣೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಸೋಮವಾರ ಸುದ್ದಿಗೋಷ್ಠಿ ನಡೆಸಿ ಮಾಹಿತಿ ನೀಡಿದರು.



> ಆರೋಪಿಗಳನ್ನು ಚಾಣಾಕ್ಷತನದಿಂದ ಬಂಧಿಸಿ ಗಾಂಜಾವನ್ನು ವಶಪಡಿಸಿಕೊಂಡು ಆರೋಪಿತರನ್ನು ನ್ಯಾಯಾಂಗ ವಶಕ್ಕೆ ನೀಡಲಾಗಿದೆ. ಗಾಂಜಾ ಪೂರೈಕೆ ಆಗುತ್ತಿರುವ ಬಗ್ಗೆ ಇನ್ನೂ ಹೆಚ್ಚಿನ ತನಿಖೆ ಮುಂದುವರೆದಿದ್ದು, ಒಟ್ಟಾರೆಯಾಗಿ ಆರೋಪಿತರಿಂದ ಒಂದು ಬೈಕ್, 6 ಮೊಬೈಲ್ ಫೋನುಗಳು, 1 ಸಾವಿರ ರೂ ನಗದು ಹಣ ವಶಪಡಿಸಿಕೊಂಡು ತನಿಖೆ ಮುಂದುವರೆಸಲಾಗಿದೆ ಎಂದು ಎಸ್.ಪಿ ಬಿ.ಎಸ್ ನೇಮಗೌಡ ತಿಳಿಸಿದರು.

ಅಕ್ರಮ ಗಾಂಜಾ ಮಾರಾಟ ಮತ್ತು ಸಾಗಾಟಗಾರರಿಗೆ ಬಲೆ ಬೀಸಿ, ಗ್ರಾಮೀಣ ಪೊಲೀಸ್ ಠಾಣೆಯ ಇನ್ಸಪೆಕ್ಟರ್ ಸಿದ್ದರಾಮೇಶ್ವರ ಗಡೇದ, ಪಿಎಸ್‌ಐಗಳಾದ ಎ.ಆರ್. ರಾಮೇನಹಳ್ಳಿ, ಎಸ್.ಬಿ. ಕವಲೂರ, ಸಿಬ್ಬಂದಿಗಳಾದ ಪ್ರಕಾಶ ಗಾಣಗೇರ, ಅಶೋಕ ಬೂದಿಹಾಳ, ಅನಿಲ ಬನ್ನಿಕೊಪ್ಪ, ಗಂಗಾಧರ ಮಜ್ಜಗಿ, ರಾಜಮಹ್ಮದ ಅಲಮದಾರ, ಹೇಮಂತ ಪರಸಣ್ಣವರ, ಲಕ್ಷ್ಮಣ ಪೂಜಾರ, ಪ್ರವೀಣ ಶಾಂತಪ್ಪನವರ, ರವಿ ನಾಯ್ಕರ ಮತ್ತು ತಾಂತ್ರಿಕ ಸಿಬ್ಬಂದಿಗಳಾದ ಗುರು ಬೂದಿಹಾಳ, ಸಂಜೀವ ಕೊರಡೂರ ಇವರನ್ನೊಳಗೊಂಡ ತಂಡವನ್ನು ರಚಿಸಲಾಗಿತ್ತು.

> ಆಧುನಿಕ, ಅಗತ್ಯ ತಂತ್ರಾಂಶ ಮತ್ತು ತಮ್ಮ ಕೌಶಲ್ಯದಿಂದ ಈ ಕಾರ್ಯಾಚರಣೆಯಲ್ಲಿ ಪಾಲ್ಗೊಂಡು ಅಕ್ರಮ ಗಾಂಜಾ ಮಾರಾಟ ಜಾಲವನ್ನು ಬೇಧಿಸಿದ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಗದಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಪ್ರಶಂಸೆ ವ್ಯಕ್ತಪಡಿಸಿದ್ದಾರೆ.

**ಬಂಧಿತ ಆರೋಪಿಗಳು**

- ಬಾಪು ಪುಣಜಪ್ಪ ಹರಣಸಿಕಾರಿ,
- ಚಂದಪ್ಪ ತಂದೆ ಪುಣಜಪ್ಪ ಹರಣಸಿಕಾರಿ
- ಗಾಯಿತ್ರಿ ಕೋಂ ಮಾರುತಿ ಕಾಳೆ
- ಮಾರುತಿ ಶೇಖಪ್ಪ ಕಾಳೆ
- ಗೋಪಾಲ ರಾಮಚಂದ್ರ ಬಸವಾ
- ಕಲ್ಯಾಣಬಾಬು ಚಿನ್ನನಾಗು ಶಿಕಾರಿ

ತನಿಖೆ ಚುರುಕುಗೊಳಿಸಿದ್ದ ತಂಡ ಹಲವು ಆಯಾಮಗಳಿಂದ ಮಾಹಿತಿ ಸಂಗ್ರಹಿಸಿ ಅಕ್ರಮವಾಗಿ ಗಾಂಜಾ ಮಾರಾಟ ಮಾಡುತ್ತಿದ್ದ 6 ಜನರನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ. ಬಂಧಿತರಿಂದ ಅಂದಾಜು 6.7 ಕೆ.ಜಿ ತೂಕದ ಗಾಂಜಾವನ್ನು ವಶಪಡಿಸಿಕೊಂಡಿದ್ದು, ಅಂದಾಜು 6 ಲಕ್ಷ 70 ಸಾವಿರ ರೂಪಾಯಿಗಳು ಎಂದು ಅಂದಾಜಿಸಲಾಗಿದೆ. ಈ ಬಗ್ಗೆ ಗದಗ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ಸಂಖ್ಯೆ 148/2025 ಕಲಂ 20(ಎ) ಎನ್‌ಡಿಪಿಎಸ್ ಪ್ರಕರಣ ದಾಖಲಿಸಲಾಗಿದೆ ಎಂದು ಮಾಹಿತಿ ನೀಡಿದರು.

**ಸರಕಾರಿ ಪ್ರೌಢಶಾಲೆಯ ಪತ್ರಿಕಾ ದಿನಾಚರಣೆ ಕಾರ್ಯಕ್ರಮದಲ್ಲಿ ರಾಮಣ್ಣ ಕಮಾಜಿ ಕರೆ**

# ವಿದ್ಯಾರ್ಥಿಗಳು ಪತ್ರಿಕೆ ಓದುವ ಹವ್ಯಾಸ ರೂಢಿಸಿಕೊಳ್ಳಿ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಸಮಾಜದ ಓರೆಕೋರೆಗಳನ್ನು ತಿದ್ದುವ ಮಹತ್ವದ ಕೆಲಸವನ್ನು ಪತ್ರಿಕೆಗಳು ನಿರ್ವಹಿಸುತ್ತವೆ. ಇಂದಿಗೂ ಪತ್ರಿಕೆಗಳ ಪ್ರಾಸಂಗಿಕತೆ ಕಡಿಮೆಯಾಗಿಲ್ಲ. ಮಕ್ಕಳಲ್ಲಿ ಪತ್ರಿಕೆ ಓದುವ ಹವ್ಯಾಸ ಬೆಳೆಸುವುದು ಅವುಗಳ ಮಹತ್ವವನ್ನು ಅರಿಯಲು ನೆರವಾಗುತ್ತದೆ ಎಂದು ಉದ್ಯಮಿ ರಾಮಣ್ಣ ಕಮಾಜಿ ಹೇಳಿದರು.

ಪಟ್ಟಣದ ಸರಕಾರಿ ಪ್ರೌಢಶಾಲೆ (ಆರ್.ಎಂ.ಎಸ್.ಇ)ಯಲ್ಲಿ ಸೋಮವಾರ ನಡೆದ ಪತ್ರಿಕಾ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಕ್ಕಳು ಪ್ರತಿದಿನವೂ ಪತ್ರಿಕೆ ಓದುವುದರಿಂದ ಜ್ಞಾನವೃದ್ಧಿಯಾಗುತ್ತದೆ. ಪ್ರಚಲಿತ ವಿದ್ಯಮಾನಗಳ ಅರಿವಿಗೆ ಪತ್ರಿಕೆಗಳ ಪಾತ್ರ ಅಪಾರವಾಗಿದೆ. ಈ ಡಿಜಿಟಲ್ ಯುಗದಲ್ಲೂ ಪತ್ರಿಕೆಗಳ ವಾಚನ ಅನುಭವಕ್ಕೆ ವಿಶೇಷ ಮೌಲ್ಯವಿದ್ದು, ಪತ್ರಿಕೆಗಳ ವಸ್ತುನಿಷ್ಠತೆ ಮತ್ತು ನಿಖರತೆ ಅನನ್ಯವಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿದ ಆರ್. ಎನ್. ದೇಶಪಾಂಡೆ ಪದವಿ ಕಾಲೇಜಿನ ಪ್ರಾಚಾರ್ಯ ಡಾ. ಆರ್.ಎಂ. ಕಲ್ಲನಗೌಡರ, 1843 ಜುಲೈ 1ರಂದು ಆರಂಭವಾದ 'ಮಂಗಳೂರು ಸಮಾಚಾರ' ಕನ್ನಡದ ಮೊದಲ ಪತ್ರಿಕೆ. ಪತ್ರಿಕಾ ಸಾಹಿತ್ಯವನ್ನು ಅಂತಾರಾಷ್ಟ್ರೀಯ, ರಾಷ್ಟ್ರೀಯ ಮತ್ತು ಪ್ರಾದೇಶಿಕ ಮಟ್ಟದಲ್ಲಿ ಗುರುತಿಸಬಹುದು. ಪತ್ರಿಕೋದ್ಯಮವು ಸಂವಿಧಾನದ ನಾಲ್ಕನೇ ಅಂಗವಾಗಿದ್ದು, ಪತ್ರಿಕೆಗಳು ನ್ಯಾಯ, ನೈತಿಕತೆ ಮತ್ತು ಜವಾಬ್ದಾರಿಯ ಪ್ರತೀಕವಾಗಿವೆ ಎಂದು ವಿವರಿಸಿದರು.



> ಮುಳಗುಂದ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಬಸವರಾಜ ಸುಂಕಾಪುರ ಮಾತನಾಡಿ, ಇಂದಿನ ಪತ್ರಿಕೋದ್ಯಮವು ಹಲವು ಬಿಕ್ಕಟ್ಟಿನ ಮಧ್ಯೆ ಸಾಗುತ್ತಿದೆ. ರಾಜಕೀಯ ಮತ್ತು ಬಂಡವಾಳಶಾಹಿಯ ಒತ್ತಡದ ನಡುವೆ ಪತ್ರಕರ್ತರು ತಮ್ಮ ಜೀವದ ಹಂಗು ತೊರೆದು ಸತ್ಯವನ್ನು ಜನತೆಯೆದುರು ತರುತ್ತಿದ್ದು, ಅವರ ಸೇವೆ ಅಪಾರ ಎಂದು ಪ್ರಶಂಸಿಸಿದರು.

ಕಾರ್ಯಕ್ರಮದಲ್ಲಿ ಎಸ್‌ಡಿಎಂಸಿ ಅಧ್ಯಕ್ಷ ಮಹಾದೇವಪ್ಪ ಮಾನೇಗಾರ, ಪ.ಪಂ ಸ್ಥಾಯಿ ಸಮಿತಿ ಅಧ್ಯಕ್ಷ ಐ.ಎಂ. ಶೇಖ್, ಪ.ಪಂ ಮುಖ್ಯಾಧಿಕಾರಿ ಮಂಜುನಾಥ ಗುಳೇದ, ಡಾ. ಎಸ್.ಸಿ. ಚವಡಿ, ಆರ್. ಎಂ. ಕಲ್ಲನಗೌಡರ, ಹೊನ್ನಪ್ಪ ನೀಲಗುಂದ, ವಿ.ಡಿ. ಕಣವಿ, ಎಂ.ಎ. ಜಮಾಲಸಾಬನವರ, ಭರತ ಕುರಣಿ, ಎಸ್.ಎಚ್. ಪೂಜಾರಿ, ನೂರಹ್ಮದ್ ನದಾಫ್, ವಿ.ಟಿ. ಅಂಗಡಿ, ಬಸವರಾಜ ಗೌರಿಮಣಿ, ಗೀತಾ ಪಾಟೀಲ, ಬಿ.ವಿ. ಸುಂಕಾಪೂರ ಹಾಗೂ ದತ್ತಣ್ಣ ಯಳವತ್ತಿ ಉಪಸ್ಥಿತರಿದ್ದರು.

# ಉದ್ಯೋಗ ಪಡೆಯುವತ್ತ ಗಮನ ಹರಿಸಿ



■ವಿಜಯಸಾಕ್ಷಿ ಸುದ್ದಿ, ಡಂಬಳ

ಪ್ರಸ್ತುತ ವಿದ್ಯಾರ್ಥಿಗಳು ಕೇವಲ ವಿದ್ಯಾವಂತರಾಗಿ ಪದವಿಯನ್ನು ಪಡೆದರೆ ಸಾಲದು. ಅದರೊಂದಿಗೆ ತಂತ್ರಜ್ಞಾನ ಹಾಗೂ ಹೊಸ ಆವಿಷ್ಕಾರ ಕೌಶಲ್ಯ ಬಳಸಿಕೊಳ್ಳುವ ಮೂಲಕ ಉದ್ಯೋಗವನ್ನು ರೂಪಿಸಿಕೊಳ್ಳುವುದು ಅಗತ್ಯವಾಗಿದೆ ಎಂದು ಶಿವಾನಂದ ಪಟ್ಟಣಶೆಟ್ಟಿ ಹೇಳಿದರು.

ಅವರು ಡಂಬಳದ ಜಗದ್ಗುರು ತೋಂಟದಾರ್ಯ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ವಾರ್ಷಿಕ ಸ್ನೇಹ ಸಮ್ಮೇಳನ ಹಾಗೂ ಬೀಳ್ಕೊಡುಗೆ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಐಟಿಐನಲ್ಲಿ ತರಬೇತಿ ಪಡೆದ ವಿದ್ಯಾರ್ಥಿಗಳು ತಮ್ಮ ತಮ್ಮ ವೃತ್ತಿಯಲ್ಲಿ ಕೌಶಲ್ಯ ಪಡೆದು ಹೊಸ ತಂತ್ರಜ್ಞಾನ ಹಾಗೂ ಆವಿಷ್ಕಾರಗಳನ್ನು ಬಳಸಿಕೊಂಡು, ಉನ್ನತ ವೃತ್ತಿ ಜೀವನ ನಡೆಸುವತ್ತ ಮುನ್ನುಗ್ಗಿ ಸಮಾಜದ ಮುಖ್ಯ ವಾಹಿನಿಗೆ ಬರಬೇಕು ಎಂದರು.

ಪ್ರಾಚಾರ್ಯ ಎಸ್. ಎಂ. ಶಿವರಾಚಯ್ಯ ಮಾತನಾಡಿ, ಐಟಿಐ ಕೋರ್ಸ್ ಮುಗಿದ ತಕ್ಷಣ ಅಪ್ರೆಂಟಿಸ್ ಕೋರ್ಸ್ ಮಾಡುವದರಿಂದ ಕೆಲಸದೊಂದಿಗೆ ಸಂಬಳವನ್ನೂ ಪಡೆಯಬಹುದು. ಪ್ರತಿಯೊಬ್ಬರೂ ಇದರ ಸದುಪಯೋಗವನ್ನು ಪಡೆದುಕೊಂಡು ಆರ್ಥಿಕವಾಗಿ ಸಬಲರಾಗಬೇಕು ಎಂದರು.

ಡಾ. ಉಮೇಶ ಪುರದ, ಈ.ವಿ. ಹಿರೇಮಠ, ಆರ್.ವಿ. ಘಳಗಿ, ಆರ್.ಜಿ. ಕೊರ್ಲಹಳ್ಳಿ, ಕೈಗಾರಿಕಾ ತರಬೇತಿ ಸಂಸ್ಥೆಯ ಉಪನ್ಯಾಸಕರು ಇದ್ದರು.

# ವ್ಯಾಪಾರಸ್ಥರಿಗೆ ತೊಂದರೆಯಾಗದಂತೆ ಸಹಕರಿಸಿ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷ ತಾತನಗೌಡ ಎಸ್. ಪಾಟೀಲ ನೇತೃತ್ವದ ನಿಯೋಗವು ಸ್ಥಳೀಯ ವಾಣಿಜ್ಯ ತೆರಿಗೆ ಇಲಾಖೆಯ (ಜಾರಿ) ವಿಭಾಗದ ಅಧಿಕಾರಿ ಉಮೇಶ್ ದಂಟಿ ಅವರನ್ನು ಸೋಮವಾರ ಭೇಟಿ ಮಾಡಿ, ವ್ಯಾಪಾರಸ್ಥರಿಗೆ ತೊಂದರೆಯಾಗದಂತೆ ಸಹಕಾರ ನೀಡಲು ಮನವಿ ಸಲ್ಲಿಸಿತು.

ಈ ಸಂದರ್ಭದಲ್ಲಿ ಅಧಿಕಾರಿಗಳು ಪ್ರತಿಕ್ರಿಯಿಸಿ, ವ್ಯಾಪಾರಸ್ಥರು ಜಿಎಸ್‌ಟಿ ಕಾಯ್ದೆಯ ವ್ಯಾಪ್ತಿಯಲ್ಲಿ ಇರುವಾಗ ಯಾವುದೇ ತೊಂದರೆ ಆಗುವುದಿಲ್ಲ. ಆದರೆ ಕಾಯ್ದೆಯ ಅಧೀನದಲ್ಲಿಲ್ಲದ ವಹಿವಾಟುಗಳು ಕಂಡುಬಂದಲ್ಲಿ, ನಿರ್ದಿಷ್ಟವಾಗಿ ಜಾರಿ ಇರುವ ನಿಯಮಗಳ ಅಡಿಯಲ್ಲಿ ಕ್ರಮ ಕೈಗೊಳ್ಳಲಾಗುತ್ತದೆ. ವ್ಯಾಪಾರಸ್ಥರೂ ಸಹ ತಮ್ಮ ವಹಿವಾಟುಗಳನ್ನು ಸಂಪೂರ್ಣವಾಗಿ ಕಾನೂನುಬದ್ಧವಾಗಿ ನಡೆಸಬೇಕೆಂದು ಸಲಹೆ ನೀಡಿದರು.

ನಿಯೋಗದಲ್ಲಿ ಸಂಸ್ಥೆಯ ಉಪಾಧ್ಯಕ್ಷ ವಿಜಯಕುಮಾರ ಎಸ್.ಮಾಟಲದಿನ್ನಿ, ಸಹ ಗೌರವ ಕಾರ್ಯದರ್ಶಿ ರಾಘವೇಂದ್ರ ಎಸ್. ಕಾಲವಾಡ, ಕೋಶಾಧಿಕಾರಿ ಸಂಜಯ ಬಾಗಮಾರ ಉಪಸ್ಥಿತರಿದ್ದರು ಎಂದು ಸಂಸ್ಥೆಯ ಗೌರವ ಕಾರ್ಯದರ್ಶಿ ಅಶೋಕಗೌಡ ಕೆ.ಪಾಟೀಲ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಾರ್ಗಿಲ್ ವಿಜಯೋತ್ಸವ ಜುಲೈ 26ಕ್ಕೆ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ನಿವೃತ್ತ ಸೈನಿಕರ ಸಂಘದ ವತಿಯಿಂದ ಜುಲೈ 26ರಂದು ಕಾರ್ಗಿಲ್ ವಿಜಯೋತ್ಸವವನ್ನು ಆಚರಿಸಲಾಗುವುದು ಎಂದು ಸಂಘದ ಅಧ್ಯಕ್ಷ ಶಿವಪುತ್ರಪ್ಪ ಸಂಗನಾಳ ತಿಳಿಸಿದರು.

ಸಂಘದ ಕಚೇರಿಯಲ್ಲಿ ನಡೆದ ಮಾಸಿಕ ಸಭೆಯಲ್ಲಿ ಮಾತನಾಡಿದ ಅವರು, ವಿಜಯೋತ್ಸವದ ಅಂಗವಾಗಿ ಬೆಳಿಗ್ಗೆ 9 ಗಂಟೆಗೆ ಎಲ್ಲಾ ನಿವೃತ್ತ ಸೈನಿಕರು ಸಮವಸ್ತ್ರಧಾರಿಯಾಗಿ ಸಂಘದ ಕಚೇರಿಯಲ್ಲಿ ಹಾಜರಾಗಬೇಕು ಎಂದು ಹೇಳಿದರು.



ವಿಜಯೋತ್ಸವದ ಮೆರವಣಿಗೆ ಗಾಂಧಿ ಭವನದಲ್ಲಿರುವ ಸಂಘದ ಕಚೇರಿಯಿಂದ ಪ್ರಾರಂಭವಾಗಿ ಕೊಂತಿ ಮಲ್ಲಪ್ಪನ ಗುಡಿ, ಗ್ರಾಮದೇವತೆ ದೇವಸ್ಥಾನ, ಗಣೇಶ ಗುಡಿ, ಹಳೆ ಬಸ್ ನಿಲ್ದಾಣ, ಹೊಸ ಬಸ್ ನಿಲ್ದಾಣ ಮಾರ್ಗವಾಗಿ ಮತ್ತೆ ಸಂಘದ ಕಚೇರಿಗೆ ತಲುಪಲಿದೆ. ಮೆರವಣಿಗೆಯಲ್ಲಿ ಸಾರ್ವಜನಿಕರು, ವಿವಿಧ ಸಂಘ-ಸಂಸ್ಥೆಗಳು ಹಾಗೂ ಸಂಘಟನೆಗಳು ಮುಕ್ತವಾಗಿ ಪಾಲ್ಗೊಳ್ಳಬಹುದಾಗಿದ್ದು, ಭಾಗವಹಿಸಲು ಇಚ್ಛೆಯಿರುವವರು ಕಾರ್ಯಕ್ರಮದ ಒಂದು ದಿನ ಮೊದಲು-7353773277 ಸಂಖ್ಯೆಗೆ ಕರೆ ಮಾಡಬೇಕೆಂದು ತಿಳಿಸಿದರು.

ಮೆರವಣಿಗೆಯಲ್ಲಿ ಪ್ಯಾರಾ ಮಿಲಿಟರಿ ಪಡೆ, ಎನ್‌ಸಿಸಿ ಕೆಡೆಟ್‌ಗಳು, ಹೋಮ್‌ಗಾರ್ಡ್ಸ್ ಮತ್ತು ನಿವೃತ್ತ ಸೈನಿಕರು ರಾಷ್ಟ್ರಧ್ವಜಗಳನ್ನು ಹಿಡಿದು ಘೋಷಣೆಗಳೊಂದಿಗೆ ಪಥಸಂಚಲನ ನಡೆಸಲಿದ್ದಾರೆ ಎಂದು ಮಾಹಿತಿ ನೀಡಿದರು.

ಸಭೆಯಲ್ಲಿ ಶಿವಪ್ಪ ಶಿವಾಪೂರ, ಸಂಗಪ್ಪ ಕುಷ್ಟಗಿ, ಕುಮಾರಸ್ವಾಮಿ ಕೋರಧಾನ್ಯಮಠ, ಗುರುಶಾಂತಗೌಡ ಮಲ್ಲನಗೌಡ್ರ, ಶಶಿಕಾಂತ ಕರಡಿ, ಮಲ್ಲಿಕಾರ್ಜುನ ಮಲ್ಲನಗೌಡ್ರ, ದಾವಲಸಾಬ ಕಿಲ್ಲೇದಾರ, ದಾದಾಸಾಬ ನದಾಫ್, ಬಸವೇಶ್ವರ ಚಿಕ್ಕೊಪ್ಪದ, ಇಮಾಮಸಾಬ ಕೋಲಕಾರ, ಮಲ್ಲಪ್ಪ ಕಡೆತೋಟದ, ಮಲ್ಲಮ್ಮ ಬೈರಗೊಂಡ ಸೇರಿ ಹಲವರು ಉಪಸ್ಥಿತರಿದ್ದರು.

# ನಡು ರಸ್ತೆಯಲ್ಲಿ ಗೂಳಿಗಳ ಕಾದಾಟ; ನಗರಸಭೆ ವಿರುದ್ಧ ಸ್ಥಳೀಯರ ಆಕ್ರೋಶ!

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ನಗರದ ಗಂಜಿ ಬಸವೇಶ್ವರ ಸರ್ಕಲ್‌ನಲ್ಲಿ ರಸ್ತೆಯಲ್ಲಿಯೇ ಗೂಳಿಗಳ ನಡುವೆ ಉಗ್ರ ಕಾಳಗ ನಡೆದಿದೆ. ಅರ್ಧ ಗಂಟೆಗೂ ಹೆಚ್ಚು ಕಾಲ ಬಿಡಾಡಿ ಗೂಳಿಗಳು ಪರಸ್ಪರ ಗುದ್ದಾಡಿದ್ದು, ಇದರಿಂದಾಗಿ ರಾಚೋಟೇಶ್ವರ ಹಾಗೂ ರೆಹಮತ್ ನಗರದ ರಸ್ತೆಯಲ್ಲಿ ಜನರ ಸಂಚಾರಕ್ಕೆ ಕೆಲಕಾಲ ತೊಂದರೆ ಉಂಟಾಯಿತು.



ಕಾದಾಟ ತೀವ್ರಗೊಂಡ ಹಿನ್ನೆಲೆಯಲ್ಲಿ ಸ್ಥಳೀಯರು ನೀರು ಎರಚಿ ಗೂಳಿಗಳನ್ನು ಭೀತಿಗೊಳಿಸಲು ಪ್ರಯತ್ನಿಸಿದ್ರು, ಗೂಳಿಗಳು ಬೆದರದೆ ಕಾದಾಟ ನಡೆಸುತ್ತಿದ್ದವು. ಕೊನೆಗೆ ಪಟಾಕಿ ಸಿಡಿಸಿ ಗೂಳಿಗಳನ್ನು ಚದುರಿಸಿದ ಬಳಿಕ ಮಾತ್ರ ಪರಿಸ್ಥಿತಿ ನಿಯಂತ್ರಣಕ್ಕೆ ಬಂದಿತು.

ಇನ್ನೂ ಬಿಡಾಡಿ ದನಗಳ ಹಾವಳಿ ಹೆಚ್ಚಳದಿಂದಾಗಿ ಜನರು ಬೇಸತ್ತಿದ್ದು, ಬಿಡಾಡಿ ದನಗಳ ಹಾವಳಿ ನಿಯಂತ್ರಣಕ್ಕೆ ಗದಗ ಬೆಟಗೇರಿ ನಗರಸಭೆ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ. ನಗರದ ರಸ್ತೆಗಳ ಮೇಲೆ ಬಿಡಾಡಿ ಗೂಳಿಗಳ ಹಾವಳಿ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದ್ದು, ಇಂತಹ ಘಟನೆಗಳು ಮರುಕಳಿಸದಂತೆ ಕ್ರಮ ಕೈಗೊಳ್ಳಲು ಒತ್ತಾಯ ಮಾಡಿದ್ದಾರೆ.

# ಮತಗಟ್ಟೆ ಸಿಬ್ಬಂದಿಗಳಿಗೆ ತರಬೇತಿ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿಯ ತಹಸೀಲ್ದಾರ ಕಚೇರಿಯಲ್ಲಿ ಚುನಾವಣಾ ಆಯೋಗದ ನಿರ್ದೇಶನ ಮತ್ತು ಜಿಲ್ಲಾಧಿಕಾರಿಗಳ ಆದೇಶದಂತೆ ಮತದಾರರ ಸಂಕ್ಷಿಪ್ತ ಪರಿಷ್ಕರಣೆ-2026ರ ಪೂರ್ವ ತಯಾರಿ ಕುರಿತು ಮತಗಟ್ಟೆ ಸಿಬ್ಬಂದಿಗಳಿಗೆ ಶಿರಹಟ್ಟಿ ವಿಧಾನಸಭಾ ಕ್ಷೇತ್ರದ ಮತದಾರರ ನೋಂದಣಾಧಿಕಾರಿ ನಂದಾ ಹಣಬರಟ್ಟಿ ಅಧ್ಯಕ್ಷತೆಯಲ್ಲಿ ಸೋಮವಾರ ತರಬೇತಿ ನೀಡಲಾಯಿತು.



ಈ ಸಂದರ್ಭದಲ್ಲಿ ಮಾತನಾಡಿದ ಶಿರಹಟ್ಟಿ ವಿಧಾನಸಭಾ ಕ್ಷೇತ್ರದ ಮತದಾರರ ನೋಂದಣಾಧಿಕಾರಿ ನಂದಾ ಹಣಬರಟ್ಟಿ, ಮತಗಟ್ಟೆ ಮಟ್ಟದ ಅಧಿಕಾರಿಗಳು ಚುನಾವಣೆಯಲ್ಲಿ ಪ್ರಮುಖ ಪಾತ್ರ ವಹಿಸುತ್ತಾರೆ. ಮತಗಟ್ಟೆ ಅಧಿಕಾರಿಗಳು ತಮಗೆ ನಿಯೋಜಿಸಿದ ಭಾಗಕ್ಕೆ ಸಂಬಂಧಿಸಿದ ಪಟ್ಟಿಯನ್ನು ಪರಿಶೀಲನೆ ಮಾಡಬೇಕು. ಸ್ಥಳೀಯ ಜನರೊಂದಿಗೆ ವಿಶೇಷವಾಗಿ ಹಿರಿಯರು ಮತ್ತು ಚುನಾಯಿತ ಪ್ರತಿನಿಧಿಗಳೊಂದಿಗೆ ಸಂವಹನ ನಡೆಸಬೇಕು. ಮತದಾರರ ಪಟ್ಟಿಯಲ್ಲಿ ಮೃತ ಮತದಾರರ, ಸ್ಥಳಾಂತರಗೊಂಡ, ಪುನರಾವರ್ತಿತ, ನಕಲಿ ಮತದಾರರ ಹೆಸರನ್ನು ಗುರುತಿಸುವ ಕೆಲಸ ಮಾಡುವುದರ ಜೊತೆಗೆ ಆಯೋಗದ ಎಲ್ಲ ನಿಯಮಗಳನ್ನು ಪಾಲಿಸಿ ಸಮರ್ಪಕವಾಗಿ ಕೆಲಸ ಮಾಡಬೇಕೆಂದು ಸೂಚಿಸಿದರು.

ತಹಸೀಲ್ದಾರ ರಾಘವೇಂದ್ರರಾವ್ ಕೆ ಮತ್ತು ಮತಗಟ್ಟೆ ಅಧಿಕಾರಿಗಳು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka